ಕರ್ನಾಟಕ ಸರ್ಕಾರ
ಕರ್ನಾಟಕ ಪರೀಕ್ಷಾ ಪ್ರಾಧಿಕಾರ
ಬೆಂಗಳೂರು

ಸಂಖ್ಯೆ:ಇಡಿ/ಕೆಇಎ/15/ನೇ.ವಿ./2026(ಕೆಕೆ) **ದಿನಾಂಕ: 29.10.2026**

ಅಧಿಸೂಚನೆ

ಕರ್ನಾಟಕ ರಾಜ್ಯದ ವಿವಿಧ ಇಲಾಖೆ / ಸಂಸ್ಥೆ / ನಿಗಮ / ಮಂಡಳಿಗಳಲ್ಲಿನ **ಕಲ್ಯಾಣ-ಕರ್ನಾಟಕ ಸ್ಥಳೀಯ ವೃಂದದಲ್ಲಿ** ಖಾಲಿಯಿರುವ **ಕರ್ನಾಟಕ ನಾಗರಿಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು, 2021 ಹಾಗೂ ಕಾಲಕಾಲಕ್ಕೆ ಆದ ತಿದ್ದುಪಡಿ ನಿಯಮಗಳನ್ವಯ** ವಿವಿಧ ಗ್ರೂಪ್-ಸಿ ವೃಂದದ **ಪದವಿ ಮಟ್ಟದ ವಿದ್ಯಾರ್ಹತೆ ಹೊಂದಿರುವ ಹಾಗೂ ಒಂದೇ ಪತ್ಯಕ್ರಮ ಇರುವ** ನೇರ ನೇಮಕಾತಿ ಹುದ್ದೆಗಳನ್ನು ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಅರ್ಹ ಅಭ್ಯರ್ಥಿಗಳಿಂದ ಭರ್ತಿ ಮಾಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಅರ್ಹ ಅಭ್ಯರ್ಥಿಗಳು ಸದರಿ ಹುದ್ದೆಗಳ ನೇಮಕಾತಿಗೆ ಅರ್ಹತೆ ಪಡೆಯಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗಬೇಕು.

ಇಲಾಖೆ ಮತ್ತು ಹುದ್ದೆಗಳ ವಿವರ

ಕ್ರ. ಸಂ	ಇಲಾಖೆಯ ಹೆಸರು	ಹುದ್ದೆಯ ವಿವರ	ವೇತನ ಶ್ರೇಣಿ ರೂ.ಗಳಲ್ಲಿ	ಹುದ್ದೆಗಳ ಸಂಖ್ಯೆ
1.	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ	ನಿಲಯ ಮೇಲ್ವಿಚಾರಕರು (ಪುರುಷ)	44425-83700	89+05(**ಸೇ**)
2.	ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ	ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಮತ್ತು ಗ್ರಾಮೀಣಾಭಿವೃದ್ಧಿ ಸಹಾಯಕ ಗ್ರೇಡ್-1 (ಗ್ರಾಮ ಪಂಚಾಯಿತಿ)	44425-83700	49 (**ವಿವಿಧ ಜಿಲ್ಲೆಗಳಲ್ಲಿನ ಹುದ್ದೆಗಳ ವಿವರ ಕೆಳಗೆ** ನೀಡಲಾಗಿದೆ)
3.		ಪ್ರಥಮ ದರ್ಜೆ ಸಹಾಯಕ (ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿ)	44425-83700	48 (**ವಿವಿಧ ಜಿಲ್ಲೆಗಳಲ್ಲಿನ ಹುದ್ದೆಗಳ ವಿವರ ಕೆಳಗೆ** ನೀಡಲಾಗಿದೆ)
4.	ನ್ಯಾಯಾಂಗ ಇಲಾಖೆ	ಪ್ರಥಮ ದರ್ಜೆ ಸಹಾಯಕರು	44425-83700	33 (**ವಿವಿಧ ನ್ಯಾಯಾಲಯಗಳಲ್ಲಿನ ಹುದ್ದೆಗಳ ವಿವರ ಕೆಳಗೆ** ನೀಡಲಾಗಿದೆ)
5.	ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ	ನಿಲಯಪಾಲಕರು	44425-83700	27+01(**ಹಿಂ**)
6.	ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ	ಸಹಕಾರ ಸಂಘಗಳ ಲೆಕ್ಕಪರಿಶೋಧಕರು	44425-83700	27
7.	ಅರಣ್ಯ ಇಲಾಖೆ	ಪ್ರಥಮ ದರ್ಜೆ ಸಹಾಯಕರು	44425-83700	26
8.	ಸಮಾಜ ಕಲ್ಯಾಣ ಇಲಾಖೆ	ವಾರ್ಡನ್(ಪುರುಷ)	44425-83700	25
9.	ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ	ಪ್ರಥಮ ದರ್ಜೆ ಸಹಾಯಕ ಕಂ. ಕಂಪ್ಯೂಟರ್ ಆಪರೇಟರ್	44425-83700	17+08(**ಹಿಂ**)

ಕ್ರ. ಸಂ	ಇಲಾಖೆಯ ಹೆಸರು	ಹುದ್ದೆಯ ವಿವರ	ವೇತನ ಶ್ರೇಣಿ ರೂ.ಗಳಲ್ಲಿ	ಹುದ್ದೆಗಳ ಸಂಖ್ಯೆ
10.	ಕೃಷಿ ಮಾರಾಟ ಇಲಾಖೆ	ಪ್ರಥಮ ದರ್ಜೆ ಸಹಾಯಕರು	44425-83700	15
11.	ಪೌರಾಡಳಿತ ನಿರ್ದೇಶನಾಲಯ	ಪ್ರಥಮ ದರ್ಜೆ ಕಂದಾಯ ನಿರೀಕ್ಷಕರು (ನಗರ ಸ್ಥಳೀಯ ಸಂಸ್ಥೆ)	44425-83700	15
12.		KMAS ಮುಖ್ಯಾಧಿಕಾರಿ ಶ್ರೇಣಿ-2 (ನಗರ ಸ್ಥಳೀಯ ಸಂಸ್ಥೆ)	54175-99400	11+1(ಸೇ)
13.	ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ	ಸಾಂಖ್ಯಿಕ ನಿರೀಕ್ಷಕರು	44425-83700	12
14.	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ	ನಿಲಯ ಮೇಲ್ವಿಚಾರಕರು (ಮಹಿಳೆ)	44425-83700	11 + 01(ಸೇ)
15.	ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕ ಪತ್ರ ಇಲಾಖೆ	ಲೆಕ್ಕ ಸಹಾಯಕರು	44425-83700	10+02(ಹಿಂ)
16.	ಕೃಷಿ ಇಲಾಖೆ	ಪ್ರಥಮ ದರ್ಜೆ ಸಹಾಯಕರು	44425-83700	11
17.	ಕರ್ನಾಟಕ ಸರ್ಕಾರ ಸಚಿವಾಲಯ	ಸಹಾಯಕ	49050-92500	10
18.	ಕಾಲೇಜು ಶಿಕ್ಷಣ ಇಲಾಖೆ	ಪ್ರಥಮ ದರ್ಜೆ ಸಹಾಯಕರು	44425-83700	10
19.	ವಾಣಿಜ್ಯ ತೆರಿಗೆಗಳ ಇಲಾಖೆ	ಪ್ರಥಮ ದರ್ಜೆ ಸಹಾಯಕರು	44425-83700	10
20.	ರೇಷ್ಮೆ ಇಲಾಖೆ	ಪ್ರಥಮ ದರ್ಜೆ ಸಹಾಯಕರು	44425-83700	07
21.	ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ	ಪ್ರಥಮ ದರ್ಜೆ ಸಹಾಯಕರು	44425-83700	06
22.	ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ(ತರಬೇತಿ ವಿಭಾಗ)	ಪ್ರಥಮ ದರ್ಜೆ ಸಹಾಯಕರು	44425-83700	05
23.	ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ	ಪ್ರಥಮ ದರ್ಜೆ ಸಹಾಯಕರು	44425-83700	05
24.	ಪೌರಾಡಳಿತ ನಿರ್ದೇಶನಾಲಯ	ಲೆಕ್ಕಿಗರು (ಮಹಾನಗರ ಪಾಲಿಕೆ - ಬಿಬಿಎಂಪಿ ಹೊರತುಪಡಿಸಿ)	49050-92500	05
25.		ಪ್ರಥಮ ದರ್ಜೆ ಕಂದಾಯ ನಿರೀಕ್ಷಕರು (ಮಹಾನಗರ ಪಾಲಿಕೆ - ಬಿಬಿಎಂಪಿ ಹೊರತುಪಡಿಸಿ)	44425-83700	05
26.	ಸಾರಿಗೆ ಇಲಾಖೆ	ಪ್ರಥಮ ದರ್ಜೆ ಸಹಾಯಕರು	44425-83700	05

ಕ್ರ. ಸಂ	ಇಲಾಖೆಯ ಹೆಸರು	ಹುದ್ದೆಯ ವಿವರ	ವೇತನ ಶ್ರೇಣಿ ರೂ.ಗಳಲ್ಲಿ	ಹುದ್ದೆಗಳ ಸಂಖ್ಯೆ
27.	ಕರ್ನಾಟಕ ಲೋಕಾಯುಕ್ತ	ಪ್ರಥಮ ದರ್ಜೆ ಸಹಾಯಕರು	44425-83700	04
28.	ಕರ್ನಾಟಕ ರಾಜ್ಯ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗ	ಪ್ರಥಮ ದರ್ಜೆ ಸಹಾಯಕರು	44425-83700	04
29.	ಕಾರ್ಮಿಕ ಇಲಾಖೆ	ಪ್ರಥಮ ದರ್ಜೆ ಸಹಾಯಕರು	44425-83700	04
30.	ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಮುನಿರಾಬಾದ್ (ಜಲ ಸಂಪನ್ಮೂಲ ಇಲಾಖೆ)	ಪ್ರಥಮ ದರ್ಜೆ ಸಹಾಯಕರು	44425-83700	04
31.	ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ	ವಾರ್ತಾ ಸಹಾಯಕ	54175-99400	04
32.	ಕರ್ನಾಟಕ ಲೋಕಸೇವಾ ಆಯೋಗ	ಸಹಾಯಕ	49050-92500	03
33.	ಗಣಿ ಮತ್ತು ಭೂ ವಿಜ್ಞಾನ ಇಲಾಖೆ	ಪ್ರಥಮ ದರ್ಜೆ ಸಹಾಯಕರು	44425-83700	03
34.	ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ	ಸಹಾಯಕ	49050-92500	03
35.	ಅಂತರ್ಜಲ ನಿರ್ದೇಶನಾಲಯ	ಪ್ರಥಮ ದರ್ಜೆ ಸಹಾಯಕರು	44425-83700	03
36.	ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ	ಪ್ರಥಮ ದರ್ಜೆ ಸಹಾಯಕರು	44425-83700	02
37.	ವಾಣಿಜ್ಯ ತೆರಿಗೆಗಳ ಇಲಾಖೆ	ವಾಣಿಜ್ಯ ತೆರಿಗೆ ಪರಿವೀಕ್ಷಕರು	54175-99400	02
38.	ವಿದ್ಯುತ್ ಪರಿವೀಕ್ಷಣಾಲಯ ಇಲಾಖೆ	ಪ್ರಥಮ ದರ್ಜೆ ಸಹಾಯಕರು	44425-83700	02
39.	ಸಹಕಾರ ಸಂಘಗಳ ನಿಬಂಧಕರ ಕಛೇರಿ	ಪ್ರಥಮ ದರ್ಜೆ ಸಹಾಯಕರು	44425-83700	02
40.	ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಕಲಬುರಗಿ (ಜಲ ಸಂಪನ್ಮೂಲ ಇಲಾಖೆ)	ಪ್ರಥಮ ದರ್ಜೆ ಸಹಾಯಕರು	44425-83700	02
41.	ಕಾರ್ಖಾನೆಗಳು, ಬಾಯ್ಲರುಗಳು ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ	ಪ್ರಥಮ ದರ್ಜೆ ಸಹಾಯಕರು	44425-83700	02
42.	ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ	ಪ್ರಥಮ ದರ್ಜೆ ಸಹಾಯಕರು	44425-83700	01

ಕ್ರ. ಸಂ	ಇಲಾಖೆಯ ಹೆಸರು	ಹುದ್ದೆಯ ವಿವರ	ವೇತನ ಶ್ರೇಣಿ ರೂ.ಗಳಲ್ಲಿ	ಹುದ್ದೆಗಳ ಸಂಖ್ಯೆ
43.	ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರ (ಸಿಆಸುಇ ಇ-ಆಡಳಿತ)	ಸಹಾಯಕರು	44425-83700	01
44.	ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ ನಿಯಮಿತ	ಅಧೀಕ್ಷಕರು(ಲೆಕ್ಕಪತ್ರ)	61300-112900	01
45.		ಪ್ರಥಮ ದರ್ಜೆ ಸಹಾಯಕರು	44425-83700	01
46.	ಕನ್ನಡ ಮತ್ತು ಸಂಸ್ಕೃತಿ ಇಲಾಖೆ	ಪ್ರಥಮ ದರ್ಜೆ ಸಹಾಯಕರು	44425-83700	01
47.	ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ	ಪ್ರಥಮ ದರ್ಜೆ ಸಹಾಯಕರು	44425-83700	01
48.	ಕರ್ನಾಟಕ ಗೃಹ ಮಂಡಳಿ	ಪ್ರಥಮ ದರ್ಜೆ ಸಹಾಯಕರು	44425-83700	01
		ಒಟ್ಟು ಹುದ್ದೆಗಳ ಸಂಖ್ಯೆ		**563 (545+07(ಸೇ) +11(ಹಿಂ))**

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ **ವಿವಿಧ ಜಿಲ್ಲೆ**ಗಳಲ್ಲಿನ **ಉಳಿಕೆ (ಉಳಿದ) ಮೂಲ ವೃಂದ**ದ ಗ್ರಾಮ ಪಂಚಾಯಿತಿಗಳಲ್ಲಿನ "**ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಮತ್ತು ಗ್ರಾಮೀಣಾಭಿವೃದ್ಧಿ ಸಹಾಯಕ ಗ್ರೇಡ್-1**" ಹಾಗೂ ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿಗಳಲ್ಲಿನ "**ಪ್ರಥಮ ದರ್ಜೆ ಸಹಾಯಕ**" **ಜಿಲ್ಲಾವಾರು ಹುದ್ದೆಗಳ ವಿವರ**

ಕ್ರ. ಸಂ.	ಜಿಲ್ಲೆಯ ಹೆಸರು	ಹುದ್ದೆಗಳ ಸಂಖ್ಯೆ
ಗ್ರಾಮ ಪಂಚಾಯಿತಿಗಳಲ್ಲಿನ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಮತ್ತು ಗ್ರಾಮೀಣಾಭಿವೃದ್ಧಿ ಸಹಾಯಕ ಗ್ರೇಡ್-1		
1.	ರಾಯಚೂರು	19
2.	ಕಲಬುರಗಿ	10
3.	ಬೀದರ್	08
4.	ವಿಜಯನಗರ	06
5.	ಬಳ್ಳಾರಿ	05
6.	ಕೊಪ್ಪಳ	01
ಒಟ್ಟು ಹುದ್ದೆಗಳ ಸಂಖ್ಯೆ (ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಮತ್ತು ಗ್ರಾಮೀಣಾಭಿವೃದ್ಧಿ ಸಹಾಯಕ ಗ್ರೇಡ್-1)		**49**
ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿಗಳಲ್ಲಿನ ಪ್ರಥಮ ದರ್ಜೆ ಸಹಾಯಕರು		
1.	ಕಲಬುರಗಿ	12
2.	ಯಾದಗಿರಿ	10
3.	ಬಳ್ಳಾರಿ	09
4.	ರಾಯಚೂರು	07
5.	ಕೊಪ್ಪಳ	05
6.	ವಿಜಯನಗರ	03
7.	ಬೀದರ್	01
8.	ಬೆಂಗಳೂರು ನಗರ	01
ಒಟ್ಟು ಹುದ್ದೆಗಳ ಸಂಖ್ಯೆ (ಪ್ರಥಮ ದರ್ಜೆ ಸಹಾಯಕರು)		**48**

ನ್ಯಾಯಾಂಗ ಇಲಾಖೆಯ **ವಿವಿಧ ನ್ಯಾಯಾಲಯಗಳಲ್ಲಿ** (ವಿವಿಧ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ನಗರ ಸಿವಿಲ್ ನ್ಯಾಯಾಲಯ, ಲಘು ವ್ಯವಹಾರಗಳ ನ್ಯಾಯಾಲಯ) ಖಾಲಿಯಿರುವ **"ಪ್ರಥಮ ದರ್ಜೆ ಸಹಾಯಕ" ಹುದ್ದೆಗಳ ವಿವರ**

ಕ್ರ. ಸಂ.	ನ್ಯಾಯಾಲಯಗಳ ಹೆಸರು	ಹುದ್ದೆಗಳ ಸಂಖ್ಯೆ
1.	ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ವಿಜಯನಗರ	09
2.	ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಯಚೂರು	06
3.	ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಕಲಬುರಗಿ	05
4.	ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಬೀದರ್	05
5.	ನಗರ ಸಿವಿಲ್ ನ್ಯಾಯಾಲಯ, ಬೆಂಗಳೂರು	04
6.	ಲಘು ವ್ಯವಹಾರಗಳ ನ್ಯಾಯಾಲಯ, ಬೆಂಗಳೂರು	03
7.	ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಯಾದಗಿರಿ	01
	ಒಟ್ಟು ಹುದ್ದೆಗಳ ಸಂಖ್ಯೆ	**33**

(ಗಮನಿಸಿ: ಹುದ್ದೆವಾರು ಮತ್ತು ಪ್ರವರ್ಗವಾರು ವಿವರಗಳನ್ನು ಸಂಬಂಧಪಟ್ಟ ಇಲಾಖೆಗಳು ನೀಡಿದಂತೆ ಪ್ರತ್ಯೇಕವಾಗಿ ಪ್ರಕಟಿಸಲಾಗಿದ್ದು, ತಾತ್ಕಾಲಿಕವಾಗಿರುತ್ತದೆ. ಮುಂದುವರೆದು, ಕಾಲಕಾಲಕ್ಕೆ ಸರ್ಕಾರ ಹೊರಡಿಸುವ ಆದೇಶಗಳಂತೆ ಸಂಬಂಧಪಟ್ಟ ಇಲಾಖೆಗಳು ಹುದ್ದೆವಾರು ಮತ್ತು ಪ್ರವರ್ಗವಾರು ವಿವರಗಳನ್ನು ಪರಿಷ್ಕರಿಸಿ ಸಲ್ಲಿಸಿದ್ದಲ್ಲಿ, ಹುದ್ದೆವಾರು ಮತ್ತು ಪ್ರವರ್ಗವಾರು ವಿವರಗಳು ಪರಿಷ್ಕರಣೆಗೆ ಒಳಪಟ್ಟಿರುತ್ತವೆ).

ಷರಾ:-

a) **(ಹಿಂ) - ಹಿಂಬಾಕಿ**: ಹಿಂದಿನ ನೇಮಕಾತಿಯಲ್ಲಿ ಭರ್ತಿಯಾಗದೇ ಉಳಿದಿರುವ ಹಿಂಬಾಕಿ ಹುದ್ದೆಗಳು.

b) **(ಸೇ) - ಸೇವಾನಿರತ**: ಆಯಾ ಇಲಾಖೆಯ ಉನ್ನತ ಹುದ್ದೆಗಳಿಗೆ ಆಯಾ ಸಂಸ್ಥೆಗಳಲ್ಲಿನ ಕೆಳ ದರ್ಜೆ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಮೀಸಲಿರಿಸಿರುವ ಹುದ್ದೆಗಳು.

   i. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ 05-ಮೇಲ್ವಿಚಾರಕರು(ಪುರುಷ) ಹುದ್ದೆಗಳನ್ನು ಮತ್ತು 01-ನಿಲಯ ಮೇಲ್ವಿಚಾರಕರು(ಮಹಿಳೆ) ಹುದ್ದೆಯನ್ನು **ಸದರಿ ಇಲಾಖೆಯ ಆಯಾ ಹುದ್ದೆಗಳ ಕೆಳ ದರ್ಜೆಯ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿರುವ** (ದ್ವಿತೀಯ ದರ್ಜೆ ಸಹಾಯಕ / ಕಿರಿಯ ನಿಲಯ ಮೇಲ್ವಿಚಾರಕ / ದತ್ತಾಂಶ ನಮೂದು ಸಹಾಯಕ / ವಾಹನ ಚಾಲಕ / ಅಡುಗೆಯವರು / ಅಡುಗೆ ಸಹಾಯಕರು / ಕಾವಲುಗಾರರು / ಜವಾನರು) **ಸೇವಾನಿರತ ಸಿಬ್ಬಂದಿಗಳಿಗೆ ಮೀಸಲಿರಿಸಿದ್ದು, ಆ ಸಿಬ್ಬಂದಿಗಳು ಮಾತ್ರ ಸದರಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅವಕಾಶ ಇರುತ್ತದೆ.**

   ii. ಪೌರಾಡಳಿತ ನಿರ್ದೇಶನಾಲಯದಲ್ಲಿನ 01- KMAS ಮುಖ್ಯಾಧಿಕಾರಿ ಶ್ರೇಣಿ-2 (ನಗರ ಸ್ಥಳೀಯ ಸಂಸ್ಥೆ) ಹುದ್ದೆಯನ್ನು **ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಲ್ಲಿ** ಯಾವುದೇ ಹುದ್ದೆಯಲ್ಲಿ ಕನಿಷ್ಠ ಮೂರು ವರ್ಷಗಳ ಸೇವೆಯನ್ನು (ಖಾಯಂ ಪೂರ್ವಾವಧಿಯನ್ನು ಹೊರತುಪಡಿಸಿ) ಪೂರೈಸಿರುವ ನಿಗದಿತ ಶೈಕ್ಷಣಿಕ ವಿದ್ಯಾರ್ಹತೆ ಹೊಂದಿರುವ **ಸೇವಾನಿರತ ಸಿಬ್ಬಂದಿಗಳಿಗೆ ಮಾತ್ರ** ಮೀಸಲಿರಿಸಿದೆ.

c) ಸಮಾಜ ಕಲ್ಯಾಣ ಇಲಾಖೆಯ **ವಾರ್ಡನ್ (ಪುರುಷ)** ಹುದ್ದೆಗಳು ಪುರುಷ ಅಭ್ಯರ್ಥಿಗಳಿಗೆ ಮೀಸಲಾಗಿದ್ದು, ಸಮತಳ ಮೀಸಲಾತಿಯ ಮಹಿಳಾ ಮತ್ತು ಎಲ್ಲಾ ರಿಕ್ತ ಸ್ಥಾನಗಳನ್ನು ನಿಯಮಾನುಸಾರ ಪುರುಷ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. ಆದಕಾರಣ **ಪುರುಷ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸತಕ್ಕದ್ದು.**

d) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ **ನಿಲಯ ಮೇಲ್ವಿಚಾರಕರು (ಪುರುಷ)** ಹುದ್ದೆಗಳು ಪುರುಷ ಅಭ್ಯರ್ಥಿಗಳಿಗೆ ಮೀಸಲಾಗಿದ್ದು, ಸಮತಳ ಮೀಸಲಾತಿಯ ಮಹಿಳಾ ಮತ್ತು ಎಲ್ಲಾ ರಿಕ್ತ ಸ್ಥಾನಗಳನ್ನು ನಿಯಮಾನುಸಾರ ಪುರುಷ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. ಆದಕಾರಣ **ಪುರುಷ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸತಕ್ಕದ್ದು.**

e) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ **ನಿಲಯ ಮೇಲ್ವಿಚಾರಕರು (ಮಹಿಳೆ)** ಹುದ್ದೆಗಳು ಮಹಿಳಾ ಅಭ್ಯರ್ಥಿಗಳಿಗೆ ಮೀಸಲಾಗಿದ್ದು, ಎಲ್ಲಾ ರಿಕ್ತ ಸ್ಥಾನಗಳನ್ನು ಮಹಿಳಾ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. ಆದಕಾರಣ **ಮಹಿಳಾ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸತಕ್ಕದ್ದು.**

f) **ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ** ಗ್ರಾಮ ಪಂಚಾಯಿತಿಗಳಲ್ಲಿನ "**ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಮತ್ತು ಗ್ರಾಮೀಣಾಭಿವೃದ್ಧಿ ಸಹಾಯಕ ಗ್ರೇಡ್-1**" ಹಾಗೂ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿಗಳಲ್ಲಿನ "**ಪ್ರಥಮ ದರ್ಜೆ ಸಹಾಯಕ**" ಹುದ್ದೆಗಳು **ಜಿಲ್ಲಾ ಮಟ್ಟದ ವೃಂದ**ಗಳಾಗಿದ್ದು ಹಾಗೂ **ಜಿಲ್ಲಾ ಮಟ್ಟದ ಪ್ರತ್ಯೇಕ ಜೇಷ್ಠತೆ**ಯನ್ನು ಹೊಂದಿರುತ್ತದೆ. ಆಯಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸಕ್ಷಮ ಪ್ರಾಧಿಕಾರ ಹಾಗೂ ನೇಮಕಾತಿ ಪ್ರಾಧಿಕಾರ ಆಗಿರುತ್ತಾರೆ. ಈ ಹಿನ್ನೆಲೆಯಲ್ಲಿ ಆಯಾ ಜಿಲ್ಲೆಗೆ ಆಯ್ಕೆಯಾಗುವ ಅಭ್ಯರ್ಥಿಗಳು ಆಯಾ ಜಿಲ್ಲೆಗಳಲ್ಲಿಯೇ ಕರ್ತವ್ಯನಿರ್ವಹಿಸಬೇಕು.

g) **ನ್ಯಾಯಾಂಗ ಇಲಾಖೆಯ** ವಿವಿಧ ನ್ಯಾಯಾಲಯಗಳಲ್ಲಿನ ಹುದ್ದೆಗೆ ಆಯ್ಕೆಗೊಳ್ಳುವ ಅಭ್ಯರ್ಥಿಗಳು ಆಯಾ ನ್ಯಾಯಾಲಯಗಳ ವ್ಯಾಪ್ತಿಯಲ್ಲಿಯೇ ಕರ್ತವ್ಯ ನಿರ್ವಹಿಸಬೇಕು.

1. ಶೈಕ್ಷಣಿಕ ವಿದ್ಯಾರ್ಹತೆ:-

ಕ್ರ.ಸಂ	ಹುದ್ದೆ	ಶೈಕ್ಷಣಿಕ ವಿದ್ಯಾರ್ಹತೆ
1.	ಲೆಕ್ಕ ಸಹಾಯಕರು	Must possess B.Com or B.B.M or B.B.A Degree, or Posses any other equivalent qualification notified as such by U.G.C [ತತ್ಸಮಾನ ವಿದ್ಯಾರ್ಹತೆಗಳು(Equivalent) (1). BBS/BBM/BBE Restructured as BBA or B.Com or B.Com (Hons) (2). BIBF be Restructured as BBA or B.Com (International Business & Finance)].
2.	ವಾರ್ಡನ್(ಪುರುಷ)	ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಪದವಿ ಮತ್ತು ಬ್ಯಾಚುಲರ್ ಆಫ್ ಎಜ್ಯುಕೇಷನ್(B.Ed) ಪದವಿಯನ್ನು ಪಡೆದಿರಬೇಕು.
3.	ನಿಲಯ ಮೇಲ್ವಿಚಾರಕರು (ಪುರುಷ) / ನಿಲಯ ಮೇಲ್ವಿಚಾರಕರು (ಮಹಿಳೆ)	ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಯಾವುದಾದರೂ ಒಂದು ಪದವಿ ಮತ್ತು ಬ್ಯಾಚುಲರ್ ಆಫ್ ಎಜ್ಯುಕೇಷನ್(B.Ed) ಪದವಿಯನ್ನು ಪಡೆದಿರಬೇಕು.
4.	ಸಹಕಾರ ಸಂಘಗಳ ಲೆಕ್ಕಪರಿಶೋಧಕರು	ಕಾನೂನು ರೀತ್ಯ ಸ್ಥಾಪಿತವಾದ ವಿಶ್ವವಿದ್ಯಾಲಯ ವಾಣಿಜ್ಯಶಾಸ್ತ್ರ, ಪದವಿಯನ್ನು ಹೊಂದಿರಬೇಕು, ಅದರಲ್ಲಿ ಅಕೌಂಟೆನ್ಸಿ ಮತ್ತು ಆಡಿಟಿಂಗ್ ಅನ್ನು ಒಂದು ವಿಷಯವಾಗಿ ಹೊಂದಿರಬೇಕು.
5.	ಪ್ರಥಮ ದರ್ಜೆ ಸಹಾಯಕ ಕಂ. ಕಂಪ್ಯೂಟರ್ ಆಪರೇಟರ್	ಸ್ನಾತಕೋತ್ತರ ಪದವಿ ಮತ್ತು ಕರ್ನಾಟಕ ಸರ್ಕಾರದ ಅಥವಾ ಸರ್ಕಾರದ ಮಾನ್ಯತೆ ಪಡೆದ ಸಂಸ್ಥೆಯಿಂದ ಒಂದು ವರ್ಷದ ಕಂಪ್ಯೂಟರ್ ಕೋರ್ಸ್‌ನಲ್ಲಿ ಪ್ರಮಾಣ ಪತ್ರ ಪಡೆಯುವುದರೊಂದಿಗೆ ಕಂಪ್ಯೂಟರ್ ಕಾರ್ಯದಲ್ಲಿ ಜ್ಞಾನವುಳ್ಳವರಾಗಿರಬೇಕು (ಕಂಪ್ಯೂಟರ್ ಸಂಬಂಧಿ ಪದವಿಗಳಾದ BE(Computer Science, Information Science / Information Technology), BCA/MCA, BSc(Computer Science) /MSc(Computer Science), PG Diploma in Computer Application ಹೊಂದಿದ ಅಭ್ಯರ್ಥಿಗಳಿಗೆ ಒಂದು ವರ್ಷದ ಕಂಪ್ಯೂಟರ್ ಕೋರ್ಸ್‌ನ ಪ್ರಮಾಣ ಪತ್ರ ಹಾಗೂ ಕಂಪ್ಯೂಟರ್ ಕಾರ್ಯದ ಜ್ಞಾನದಿಂದ ವಿನಾಯಿತಿ ಇರುತ್ತದೆ).
6.	ನಿಲಯ ಪಾಲಕರು	ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಸ್ನಾತಕ ಪದವಿ ಮತ್ತು ಬ್ಯಾಚುಲರ್ ಆಫ್ ಎಜ್ಯುಕೇಷನ್ (B.Ed) ಪದವಿಯನ್ನು ಪಡೆದಿರಬೇಕು.

7.	ವಾಣಿಜ್ಯ ತೆರಿಗೆ ಪರಿವೀಕ್ಷಕರು	ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿಸಲಾದ ವಿಶ್ವವಿದ್ಯಾಲಯದಿಂದ ಅರ್ಥಶಾಸ್ತ್ರ, ಅಥವಾ ಗಣಿತವನ್ನು ಒಂದು ವಿಷಯವಾಗಿ ಹೊಂದಿರುವ ಪದವಿಯನ್ನು ಹೊಂದಿರಬೇಕು ಅಥವಾ ವಾಣಿಜ್ಯಶಾಸ್ತ್ರದಲ್ಲಿ ಪದವಿಯನ್ನು ಹೊಂದಿರಬೇಕು ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು (**ಷರಾ**: ಇಲಾಖೆಯ ಸ್ಪಷ್ಟೀಕರಣದಂತೆ ಅರ್ಥಶಾಸ್ತ್ರ, ಅಥವಾ ಗಣಿತ ಅಥವಾ ವಾಣಿಜ್ಯಶಾಸ್ತ್ರ, ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯವನ್ನು ಅಭ್ಯರ್ಥಿಗಳು ಅವರು ಹೊಂದಿರುವ ವಿದ್ಯಾರ್ಹತೆಯಲ್ಲಿ ಕನಿಷ್ಠ ಯಾವುದೇ ಒಂದು ಸೆಮಿಸ್ಟರ್ / ಒಂದು ವರ್ಷದಲ್ಲಿ ವ್ಯಾಸಂಗ ಮಾಡಿದ್ದಲ್ಲಿ ಸದರಿ ಪದವಿಗಳನ್ನು ಸಹ ಪರಿಗಣಿಸಲಾಗುವುದು).
8.	ಸಾಂಖ್ಯಿಕ ನಿರೀಕ್ಷಕರು	Must possess Bachelor Degree with any one of the subject of (1). Economics, (2). Statistics, (3). Mathematics and (4). Computer Science (ಸದರಿ ವಿಷಯಗಳಲ್ಲಿ ಒಂದು ವಿಷಯವನ್ನು ಎಲ್ಲಾ ವರ್ಷ / ಸೆಮಿಸ್ಟರ್ ನಲ್ಲಿ ಅಭ್ಯಾಸ ಮಾಡಿ ಪದವಿಯನ್ನು (**ಬಿ.ಕಾಂ. ಪದವಿಯನ್ನು ಹೊರತುಪಡಿಸಿ**) ಹೊಂದಿರತಕ್ಕದ್ದು.
9.	ಲೆಕ್ಕಿಗರು (ಮಹಾನಗರ ಪಾಲಿಕೆ - ಬಿಬಿಎಂಪಿ ಹೊರತುಪಡಿಸಿ)	Must have passed Bachelors Degree in Commerce (B.Com) with Accountancy and Commerce from a Government recognized University / Institution.
10.	ಅಧೀಕ್ಷಕರು(ಲೆಕ್ಕಪತ್ರ)	ಭಾರತ ಸರ್ಕಾರದ ಮಾನ್ಯತೆ ಹೊಂದಿರುವ ವಿಶ್ವವಿದ್ಯಾಲಯದಿಂದ ವಾಣಿಜ್ಯಶಾಸ್ತ್ರ, ಪದವಿ(ಬಿ.ಕಾಂ) ಹೊಂದಿರಬೇಕು ಹಾಗೂ ಸರ್ಕಾರದಿಂದ ಮಾನ್ಯತೆ ಹೊಂದಿದ ಸಂಸ್ಥೆಯಿಂದ ಕಂಪ್ಯೂಟರ್ ಜ್ಞಾನ ಪ್ರಮಾಣ ಪತ್ರ ಹೊಂದಿರತಕ್ಕದ್ದು
11.	ವಾರ್ತಾ ಸಹಾಯಕ	1). Must be holder of a degree of a University established by law in India; preference being given to candidates possessing a degree in Journalism of a University established by Law in India. 2) Must possess not less than one year experience in publicity work in a News paper, News Agency of Government Publicity Officer. 3) Must be well acquainted with Kannada and in the language required for the post. Preference being given to candidates possessing knowledge in Hindi.
12.	ಸಹಾಯಕ / ಪ್ರಥಮ ದರ್ಜೆ ಸಹಾಯಕರು / ಪ್ರಥಮ ದರ್ಜೆ ಕಂದಾಯ ನಿರೀಕ್ಷಕರು / KMAS ಮುಖ್ಯಾಧಿಕಾರಿ ಶ್ರೇಣಿ-2 / ಗ್ರಾಮ ಪಂಚಾಯಿತಿ	ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿಸಲ್ಪಟ್ಟ ವಿಶ್ವವಿದ್ಯಾಲಯದಿಂದ ಪದವಿಯನ್ನು ಹೊಂದಿರ ಬೇಕು.

	ಕಾರ್ಯದರ್ಶಿ ಮತ್ತು ಗ್ರಾಮೀಣಾಭಿವೃದ್ಧಿ ಸಹಾಯಕ ಗ್ರೇಡ್-1	

ಸೂಚನೆ

a) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ನಿಲಯ ಮೇಲ್ವಿಚಾರಕರು (ಪುರುಷ) ಮತ್ತು ನಿಲಯ ಮೇಲ್ವಿಚಾರಕರು (ಮಹಿಳೆ) ಹುದ್ದೆಗಳ ಪೈಕಿ ಸದರಿ ಇಲಾಖೆಯ ಸೇವಾನಿರತ ಸಿಬ್ಬಂದಿಗಳಿಗೆ ಮೀಸಲಿಟ್ಟಿರುವ ಹುದ್ದೆಗಳಿಗೆ - ಆಯಾ ನಿಲಯ ಮೇಲ್ವಿಚಾರಕರು ಹುದ್ದೆಯ ಕೆಳದರ್ಜೆಯ ಹುದ್ದೆಯಲ್ಲಿ (ದ್ವಿತೀಯ ದರ್ಜೆ ಸಹಾಯಕ / ಕಿರಿಯ ನಿಲಯ ಮೇಲ್ವಿಚಾರಕ / ದತ್ತಾಂಶ ನಮೂದು ಸಹಾಯಕ / ವಾಹನ ಚಾಲಕ / ಅಡುಗೆಯವರು / ಸಹಾಯಕ ಅಡುಗೆಯವರು / ಕಾವಲುಗಾರ / ಜವಾನ) ಕಾರ್ಯನಿರ್ವಹಿಸುತ್ತಿರುವ ಸೇವಾನಿರತ ಸಿಬ್ಬಂದಿಗಳಿಂದ (ಕಾರ್ಯನಿರ್ವಹಿಸುತ್ತಿರುವ ವೃಂದಗಳಲ್ಲಿ ಕನಿಷ್ಠ 05 ವರ್ಷಗಳ ಸೇವೆ ಸಲ್ಲಿಸಿರಬೇಕು) ಭರ್ತಿ ಮಾಡಲಿದ್ದು, **ಸದರಿ ಸೇವಾನಿರತ ಸಿಬ್ಬಂದಿಗಳು ನಿಲಯ ಮೇಲ್ವಿಚಾರಕರ ಹುದ್ದೆಗೆ ನಿಗದಿ ಪಡಿಸಿರುವ ವಿದ್ಯಾರ್ಹತೆಯನ್ನು ಹೊಂದಿರತಕ್ಕದ್ದು.**

b) ಪೌರಾಡಳಿತ ನಿರ್ದೇಶನಾಲಯದಲ್ಲಿನ 01- KMAS ಮುಖ್ಯಾಧಿಕಾರಿ ಶ್ರೇಣಿ-2 (ನಗರ ಸ್ಥಳೀಯ ಸಂಸ್ಥೆ) ಹುದ್ದೆಯನ್ನು **ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಲ್ಲಿ** ಯಾವುದೇ ಹುದ್ದೆಯಲ್ಲಿ ಕನಿಷ್ಠ ಮೂರು ವರ್ಷಗಳ ಸೇವೆಯನ್ನು (ಖಾಯಂ ಪೂರ್ವಾವಧಿಯನ್ನು ಹೊರತುಪಡಿಸಿ) ಪೂರೈಸಿರುವ ನಿಗದಿತ ಶೈಕ್ಷಣಿಕ ವಿದ್ಯಾರ್ಹತೆ ಹೊಂದಿರುವ **ಸೇವಾನಿರತ ಸಿಬ್ಬಂದಿಗಳಿಗೆ ಮಾತ್ರ** ಮೀಸಲಿರಿಸಿದೆ.

c) ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಯಮಿತದಲ್ಲಿನ ಪ್ರಥಮ ದರ್ಜೆ ಸಹಾಯಕರ ಹುದ್ದೆಗೆ ನಿಗದಿತ ಶೈಕ್ಷಣಿಕ ವಿದ್ಯಾರ್ಹತೆದೊಂದಿಗೆ ಸರ್ಕಾರದಿಂದ ಮಾನ್ಯತೆ ಹೊಂದಿದ ಸಂಸ್ಥೆಯಿಂದ ಕಂಪ್ಯೂಟರ್ ಜ್ಞಾನ ಪ್ರಮಾಣ ಪತ್ರ ಹೊಂದಿರತಕ್ಕದ್ದು.

d) ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರ (ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಇ-ಆಡಳಿತ) ಹುದ್ದೆಗೆ ನಿಗದಿತ ಶೈಕ್ಷಣಿಕ ವಿದ್ಯಾರ್ಹತೆದೊಂದಿಗೆ ಕಂಪ್ಯೂಟರ್ ಅಪ್ಲಿಕೇಷನ್ ನಲ್ಲಿ ಸರ್ಟಿಫಿಕೇಷ್ ಕೋರ್ಸ್ ಹೊಂದಿರತಕ್ಕದ್ದು.

ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 81 ಸೇವನೆ 2017, ದಿನಾಂಕ: 27.02.2018 ರಲ್ಲಿ ಪದವಿ ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆಗಳು ಕೆಳಕಂಡಂತಿರುತ್ತದೆ.

1. ಯುಜಿಸಿಯಿಂದ ಮಾನ್ಯತೆ ಹೊಂದಿರುವ ಪರಿಗಣಿತ ವಿಶ್ವವಿದ್ಯಾಲಯಗಳು, ಖಾಸಗಿ / ಡೀಮ್ಡ್ ಹಾಗೂ ಹೊರ ರಾಜ್ಯದ ವಿಶ್ವವಿದ್ಯಾಲಯಗಳಿಂದ ಪಡೆದ ಪದವಿಗಳು. ಆದರೆ, ವಿಶ್ವವಿದ್ಯಾಲಯಗಳ ಪದವಿಯ ತತ್ಸಮಾನದ (equivalence of degree) ಬಗ್ಗೆ ಶಿಕ್ಷಣಕ್ಕೆ ಸಂಬಂಧಿಸಿದಂತೆ ಆಯಾ ವಿಶ್ವವಿದ್ಯಾಲಯ ಮತ್ತು ಉದ್ಯೋಗಕ್ಕೆ ಸಂಬಂಧಿಸಿದಂತೆ ಉದ್ಯೋಗ ನೀಡುವ ಪ್ರಾಧಿಕಾರ ತೀರ್ಮಾನ ತೆಗೆದುಕೊಳ್ಳಲಿದೆ.
2. ಅಂಚೆ ಮತ್ತು ದೂರ ಶಿಕ್ಷಣದ ಮುಖಾಂತರ ಪಡೆದಿರುವ ಪದವಿಗಳು. ಆದರೆ, ನಿಯಮಬಾಹಿರವಾಗಿ ಕೆಲವು ವಿಶ್ವವಿದ್ಯಾಲಯಗಳು ಯು.ಜಿ.ಸಿ. ಯ ಅನುಮೋದನೆ ಇಲ್ಲದೆ ನಡೆಸುತ್ತಿರುವ ಅಂಚೆ ಮತ್ತು ದೂರ ಶಿಕ್ಷಣದ ಕೋರ್ಸುಗಳನ್ನು ಹಾಗೂ ಅಂಚೆ ಮತ್ತು ದೂರ ಶಿಕ್ಷಣದ ಮುಖಾಂತರ ಪಡೆದ ತಾಂತ್ರಿಕ ಪದವಿಗಳನ್ನು ನೇಮಕಾತಿಗೆ ಪರಿಗಣಿಸುವುದಿಲ್ಲ.

ಟಿಪ್ಪಣಿ:-

a) ಆಯಾ ಹುದ್ದೆಗಳಿಗೆ ಅನ್ವಯಿಸುವ ಮೇಲೆ ನಮೂದಿಸಿದಂತೆ ವಿದ್ಯಾರ್ಹತೆಯನ್ನು ಹೊಂದದೇ ಇರುವ ಅಭ್ಯರ್ಥಿಗಳು ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದರೆ ನಂತರ ಪ್ರಾಧಿಕಾರಕ್ಕೆ ಅಥವಾ ನೇಮಕಾತಿ ಸಮಿತಿಗೆ ವಿದ್ಯಾರ್ಹತೆ ಹೊಂದಿರುವುದಿಲ್ಲವೆಂದು ಪತ್ತೆಯಾದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಯಾವುದೇ ಹಂತದಲ್ಲಾದರೂ ರದ್ದುಪಡಿಸಲಾಗುವುದು.

b) **ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಆಯಾ ಹುದ್ದೆಗಳಿಗೆ ನಿಗದಿಪಡಿಸಿದ ಶೈಕ್ಷಣಿಕ ವಿದ್ಯಾರ್ಹತೆ / ಪ್ರಮಾಣ ಪತ್ರವನ್ನು ಹೊಂದಿರಲೇಬೇಕು.** ನಿಗದಿತ ವಿದ್ಯಾರ್ಹತೆ ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ. ಮೇಲಿನ ವಿದ್ಯಾರ್ಹತೆಯನ್ನು ಹೊರತುಪಡಿಸಿ ಬೇರೆ ಯಾವ ವಿದ್ಯಾರ್ಹತೆಯನ್ನು ಪರಿಗಣಿಸಲಾಗುವುದಿಲ್ಲ. ಅರ್ಜಿ

ಸಲ್ಲಿಸಲು ಕೊನೆಯ ದಿನಾಂಕದೊಳಗೆ ಎಲ್ಲಾ ಅಭ್ಯರ್ಥಿಗಳು ಅಂಕಪಟ್ಟಿ / ಪದವಿ / ಸರ್ಟಿಫಿಕೇಟ್ ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿಯನ್ನು ಹೊಂದಿರಬೇಕು.

c) **ವಿದ್ಯಾರ್ಹತೆಗೆ ಸಂಬಂಧಿಸಿದ ಅಂಕಪಟ್ಟಿ / ಪ್ರಮಾಣ ಪತ್ರಗಳ ಮೂಲ ದಾಖಲೆಗಳನ್ನು ಕಡ್ಡಾಯವಾಗಿ ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾದಾಗ ನೇಮಕಾತಿ ಪ್ರಾಧಿಕಾರಕ್ಕೆ ಹಾಜರುಪಡಿಸಬೇಕು. ಒಂದು ವೇಳೆ ಹಾಜರು ಪಡಿಸದಿದ್ದಲ್ಲಿ, ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವು ರದ್ದಾಗುವುದು.**

ಸೂಚನೆ: ಮೇಲ್ಕಂಡ ಹುದ್ದೆಗಳಿಗೆ ನಿಗದಿ ಪಡಿಸಿರುವ ವಿದ್ಯಾರ್ಹತೆ ಹೊರತುಪಡಿಸಿ, ಇತರೆ ವಿದ್ಯಾರ್ಹತೆಯಲ್ಲಿ ಅರ್ಜಿ ಸಲ್ಲಿಸಿ ಮುಂದಿನ ಪ್ರಕ್ರಿಯೆಯಲ್ಲಿ ಅನರ್ಹಗೊಂಡಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರ / ನೇಮಕಾತಿ ಪ್ರಾಧಿಕಾರ ಜವಾಬ್ದಾರಿಯಾಗಿರುವುದಿಲ್ಲ.

2. ವಯೋಮಿತಿ:-

ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರಲ್ಲಿ ನಿರ್ದಿಷ್ಟ ಪಡಿಸಿರುವಂತೆ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಕನಿಷ್ಠ 18 ವರ್ಷಗಳು ತುಂಬಿರತಕ್ಕದ್ದು ಹಾಗೂ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 262 ಸೇನೆನಿ 2025 ದಿನಾಂಕ 29.01.2026 ರಲ್ಲಿ ಆದೇಶಿಸಿರುವಂತೆ ಒಂದು ಬಾರಿಗೆ ಅನ್ವಯವಾಗುವಂತೆ ಗರಿಷ್ಠ ವಯೋಮಿತಿಯಲ್ಲಿ 5 ವರ್ಷಗಳ ಸಡಿಲಿಕೆಯನ್ನು ನೀಡಿದ್ದು, ಈ ಹಿನ್ನೆಲೆಯಲ್ಲಿ ಅದನ್ನು ಅಳವಡಿಸಿಕೊಂಡ ನಂತರ ಅಭ್ಯರ್ಥಿಗಳು ಈ ಕೆಳಕಂಡ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು;

ವರ್ಗ	ನೇರ ನೇಮಕಾತಿ ಅಭ್ಯರ್ಥಿಗಳಿಗೆ ಗರಿಷ್ಠ ವಯೋಮಿತಿ
ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳಿಗೆ	40 ವರ್ಷಗಳು
ಪ್ರವರ್ಗ 2ಎ, 2ಬಿ, 3ಎ ಮತ್ತು 3ಬಿ ಅಭ್ಯರ್ಥಿಗಳಿಗೆ	43 ವರ್ಷಗಳು
ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಪ್ರವರ್ಗ-1 ಅಭ್ಯರ್ಥಿಗಳಿಗೆ	45 ವರ್ಷಗಳು

- ಮುಂದುವರೆದು, ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರಲ್ಲಿ ನಿರ್ದಿಷ್ಟ ಪಡಿಸಿರುವಂತೆ ಈ ಕೆಳಗಿನ ಸಂದರ್ಭದಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

ಅ.	ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಮತ್ತು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ ಅಭ್ಯರ್ಥಿಗಳಿಗೆ	ಸೇವೆ ಸಲ್ಲಿಸಿರುವಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು
ಆ.	ಮಾಜಿ ಸೈನಿಕರಾಗಿದ್ದಲ್ಲಿ	ಸೇವೆ ಸಲ್ಲಿಸಿದ ಅವಧಿಯ ಜೊತೆಗೆ ಹೆಚ್ಚುವರಿ 03 ವರ್ಷಗಳು. "ಮಾಜಿ ಯೋಧ" ಎಂಬ ಶಬ್ದವು ಚಾಲ್ತಿಯಲ್ಲಿರುವ ಸಂಬಂಧಿಸಿದ ನಿಯಮಾವಳಿಗಳಲ್ಲಿನ ಪರಿಭಾಷೆಯ ಅರ್ಥ ಹೊಂದಿದೆ
ಇ.	National Cadet Corps ನಲ್ಲಿ ಪೂರ್ಣಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಗಳಿಗೆ	ಕೆಡೆಟ್ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು
ಈ.	ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮ ಸಮೂಹ	ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು

	ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಅಭ್ಯರ್ಥಿಗಳಿಗೆ	
ಊ.	ವಿಶೇಷ ಚೇತನ ಅಭ್ಯರ್ಥಿಗಳಿಗೆ	10 ವರ್ಷಗಳು
ಋ.	ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಅಭ್ಯರ್ಥಿಗಳಿಗೆ	ಸೇವೆ ಸಲ್ಲಿಸಿರುವ ವರ್ಷಗಳು ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.
ಋ.	ವಿಧವೆಯಾಗಿದ್ದಲ್ಲಿ (ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ವಿಧವೆಯೆಂದು ಹಾಗೂ ಮರು ಮದುವೆಯಾಗಿರುವುದಿಲ್ಲವೆಂಬ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡು ಸಕ್ಷಮ ಪ್ರಾಧಿಕಾರ ಸೂಚಿಸಿದಾಗ ಅದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು)	10 ವರ್ಷಗಳು
ಎ.	ಜೀತ ಕಾರ್ಮಿಕರಾಗಿದ್ದ ಪಕ್ಷದಲ್ಲಿ ಸದರಿ ಅಧಿನಿಯಮ ಅಥವಾ 1957 ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆ ಯಾಗಿದ್ದಾರೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್ ರವರಿಂದ ಪಡೆದಿಟ್ಟುಕೊಂಡು, ಸೂಚಿಸಿದಾಗ ಅದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು.	10 ವರ್ಷಗಳು

3. ಅರ್ಜಿ ಸಲ್ಲಿಸುವ ವಿಧಾನ:-

ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್: https://cetonline.karnataka.gov.in/kea/ ನಲ್ಲಿ ನೀಡಲಾಗುವ ಲಿಂಕ್ ಅನ್ನು ಆಯ್ಕೆ ಮಾಡಿ ಆನ್‌ಲೈನ್ ಮುಖಾಂತರ ಅರ್ಜಿಯನ್ನು ಭರ್ತಿ ಮಾಡಬೇಕು. **ಒಮ್ಮೆ ಸಲ್ಲಿಸಿದ ಅರ್ಜಿಯಲ್ಲಿನ ಯಾವುದೇ ಮಾಹಿತಿಯನ್ನು ಯಾವುದೇ ಹಂತದಲ್ಲಿ ಬದಲಾವಣೆ / ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ**. ಅಭ್ಯರ್ಥಿಗಳು ಎಚ್ಚರಿಕೆಯಿಂದ ಅಧಿಸೂಚನೆಯನ್ನು ಓದಿ ಅರ್ಥೈಸಿಕೊಂಡು, ಅರ್ಜಿ ಸಲ್ಲಿಸಲು ಸೂಚಿಸಲಾಗಿದೆ.

4. ಆನ್‌ಲೈನ್ ಅರ್ಜಿ ಸಲ್ಲಿಸಲು ವೇಳಾಪಟ್ಟಿ:

ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ	**30.10.2026**
ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ	**25.11.2026**
ಶುಲ್ಕವನ್ನು ಪಾವತಿ ಮಾಡಲು ಕೊನೆಯ ದಿನಾಂಕ	**26.11.2026**

ಸೂಚನೆ:-

- ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿ ಭರ್ತಿ ಮಾಡುವ ಮೊದಲು ಅರ್ಹತೆಗೆ ಸಂಬಂಧಿಸಿದ ಎಲ್ಲಾ ಸೂಚನೆಗಳನ್ನು ಓದಿಕೊಳ್ಳತಕ್ಕದ್ದು ಹಾಗೂ ನೀಡಿರುವ ಸೂಚನೆಗಳನ್ವಯ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು. ತಪ್ಪು ಅಥವಾ ಸುಳ್ಳು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಯಾವುದೇ ಸಮಯದಲ್ಲಿ ಆದರೂ ಯಾವುದೇ ಮುನ್ಸೂಚನೆಯನ್ನು ನೀಡದೇ ಅಭ್ಯರ್ಥಿತನವನ್ನು ರದ್ದುಗೊಳಿಸಲಾಗುವುದು ಹಾಗೂ ನಿಯಮಾನುಸಾರ ಅಂತಹವರ ವಿರುದ್ಧ ಸರ್ಕಾರ / ಪ್ರಾಧಿಕಾರ / ಇಲಾಖೆ / ಸಂಸ್ಥೆಯು ಕಾನೂನಿನನ್ವಯ ಸೂಕ್ತ ಕ್ರಮ ಕೈಗೊಳ್ಳುವುದು.
- **ಅಭ್ಯರ್ಥಿಗಳು ಕೊನೆಯ ದಿನಾಂಕದವರೆಗೆ ಕಾಯದೆ ಮುಂಚಿತವಾಗಿ ನಿಗದಿತ ಅವಧಿಯಲ್ಲಿ ಅರ್ಜಿಯನ್ನು ಸಲ್ಲಿಸತಕ್ಕದ್ದು. ಕೊನೆಯ ಸಮಯದಲ್ಲಿ ಅರ್ಜಿ ಸಲ್ಲಿಸಲು ಹಾಗೂ ಶುಲ್ಕ ಪಾವತಿಸಲು ತಾಂತ್ರಿಕ ದೋಷ / ತೊಂದರೆ ಉಂಟಾದಲ್ಲಿ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ**.

5. ಖಾಯಂಪೂರ್ವ ಅವಧಿ ಮತ್ತು ವೇತನ ಶ್ರೇಣಿ:

i. **ಖಾಯಂಪೂರ್ವ ಅವಧಿ**: ನೇರ ನೇಮಕಾತಿ ಮೂಲಕ ಆಯ್ಕೆಗೊಂಡ ಅಭ್ಯರ್ಥಿಗಳು ಎರಡು ವರ್ಷ ಖಾಯಂಪೂರ್ವ ಅವಧಿಯಲ್ಲಿರುತ್ತಾರೆ.

ii. **ವೇತನ ಶ್ರೇಣಿ ರೂ.ಗಳಲ್ಲಿ**;

a) 61300-1500-64300-1650-74200-1900-85600-2300-99400-2700-112900 - ಅಧೀಕ್ಷಕರು (ಲೆಕ್ಕ ಪತ್ರ) ಹುದ್ದೆಗೆ ಅನ್ವಯ;

b) 54175-1375-58300-1500-64300-1650-74200-1900-85600-2300-99400 - ವಾಣಿಜ್ಯ ತೆರಿಗೆ ಪರಿವೀಕ್ಷಕರು, KMAS ಮುಖ್ಯಾಧಿಕಾರಿ ಶ್ರೇಣಿ-2(ನಗರ ಸ್ಥಳೀಯ ಸಂಸ್ಥೆ), ವಾರ್ತಾ ಸಹಾಯಕ - ಹುದ್ದೆಗಳಿಗೆ ಅನ್ವಯ;
49050-1250-52800-1375-58300-1500-64300-1650-74200-1900-85600-2300-92500 - ಸಹಾಯಕ (ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರ (ಸಿಆಸುಇ ಇ-ಆಡಳಿತ)ದ ಸಹಾಯಕ ಹುದ್ದೆ ಹೊರತುಪಡಿಸಿ) / ಲೆಕ್ಕಿಗರು (ಮಹಾನಗರ ಪಾಲಿಕೆ - ಬಿಬಿಎಂಪಿ ಹೊರತುಪಡಿಸಿ) ಹುದ್ದೆಗಳಿಗೆ ಅನ್ವಯ

c) 44425-1125-47800-1250-52800-1375-58300-1500-64300-1650-74200-1900-83700 - ಪ್ರಥಮ ದರ್ಜೆ ಸಹಾಯಕ / ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಮತ್ತು ಗ್ರಾಮೀಣಾಭಿವೃದ್ಧಿ ಸಹಾಯಕ ಗ್ರೇಡ್-1(ಗ್ರಾಮ ಪಂಚಾಯಿತಿ) / ನಿಲಯ ಮೇಲ್ವಿಚಾರಕರು / ವಾರ್ಡನ್ / ಲೆಕ್ಕ ಸಹಾಯಕ / ಸಹಕಾರ ಸಂಘಗಳ ಲೆಕ್ಕ ಪರಿಶೋಧಕರು / ಸಾಂಖ್ಯಿಕ ನಿರೀಕ್ಷಕರು / ಪ್ರಥಮ ದರ್ಜೆ ಕಂ. ಕಂಪ್ಯೂಟರ್ ಆಪರೇಟರ್ / ಪ್ರಥಮ ದರ್ಜೆ ಕಂದಾಯ ನಿರೀಕ್ಷಕರು(ನಗರ ಸ್ಥಳೀಯ ಸಂಸ್ಥೆ / ಮಹಾನಗರ ಪಾಲಿಕೆ-ಬಿಬಿಎಂಪಿ ಹೊರತುಪಡಿಸಿ) ಹಾಗೂ ಸಹಾಯಕ(ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರ (ಸಿಆಸುಇ ಇ-ಆಡಳಿತ)) - ಹುದ್ದೆಗಳಿಗೆ ಅನ್ವಯ

6. ಪಿಂಚಣಿ ಸೌಲಭ್ಯ ಕುರಿತು:

a) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ನ್ಯಾಯಾಂಗ ಇಲಾಖೆ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ, ಅರಣ್ಯ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಕೃಷಿ ಮಾರಾಟ ಇಲಾಖೆ, ಪೌರಾಡಳಿತ ನಿರ್ದೇಶನಾಲಯ, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ, ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕ ಪತ್ರ ಇಲಾಖೆ, ಕೃಷಿ ಇಲಾಖೆ, ಕರ್ನಾಟಕ ಸರ್ಕಾರ ಸಚಿವಾಲಯ, ಕಾಲೇಜು ಶಿಕ್ಷಣ ಇಲಾಖೆ, ವಾಣಿಜ್ಯ ತೆರಿಗೆಗಳ ಇಲಾಖೆ, ರೇಷ್ಮೆ ಇಲಾಖೆ, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ(ತರಬೇತಿ ವಿಭಾಗ), ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ, ಕರ್ನಾಟಕ ಲೋಕಾಯುಕ್ತ, ಕರ್ನಾಟಕ ರಾಜ್ಯ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗ, ಕಾರ್ಮಿಕ ಇಲಾಖೆ, ಸಾರಿಗೆ ಇಲಾಖೆ, ವಿವಿಧ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಕರ್ನಾಟಕ ಲೋಕ ಸೇವಾ ಆಯೋಗ, ಗಣಿ ಮತ್ತು ಭೂ ವಿಜ್ಞಾನ ಇಲಾಖೆ, ಅಂತರ್ಜಲ ನಿರ್ದೇಶನಾಲಯ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಿದ್ಯುತ್ ಪರಿವೀಕ್ಷಣಾಲಯ ಇಲಾಖೆ, ಸಹಕಾರ ಸಂಘಗಳ ನಿಬಂಧಕರ ಕಛೇರಿ, ಕಾರ್ಖಾನೆಗಳು, ಬಾಯ್ಲರುಗಳು ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ, ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರ (ಸಿಆಸುಇ ಇ-ಆಡಳಿತ), ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಹಾಗೂ ಕರ್ನಾಟಕ ಗೃಹ ಮಂಡಳಿ - ಹುದ್ದೆಗಳಿಗೆ ರಾಷ್ಟ್ರೀಯ ಪಿಂಚಣಿ ಯೋಜನೆ (ಎನ್.ಪಿ.ಎಸ್) ಅನ್ವಯಿಸುತ್ತದೆ.

b) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಹಾಗೂ ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಯಮಿತ - ಹುದ್ದೆಗಳಿಗೆ ರಾಷ್ಟ್ರೀಯ ಪಿಂಚಣಿ ಯೋಜನೆ (ಎನ್.ಪಿ.ಎಸ್) ಸೌಲಭ್ಯ ಇರುವುದಿಲ್ಲ.

7. ಶುಲ್ಕ:

ಆನ್‌ಲೈನ್ ಮೂಲಕ ಮಾತ್ರ ಶುಲ್ಕ ಪಾವತಿಸಬೇಕಾಗಿರುತ್ತದೆ.

ವಿವರಗಳು	ಶುಲ್ಕ	
ಸಾಮಾನ್ಯ ಅರ್ಹತೆ ಮತ್ತು ಇತರೆ ಪ್ರವರ್ಗಗಳು (ಪ್ರವರ್ಗ-2ಎ / 2ಬಿ / 3ಎ / 3ಬಿ)	ರೂ. 750/-	ಪಾವತಿಸಿದ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ
ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಪ್ರವರ್ಗ-1 / ಮಾಜಿ ಸೈನಿಕ / ತೃತೀಯ ಲಿಂಗದ ಅಭ್ಯರ್ಥಿಗಳು	ರೂ. 500/-	
ವಿಶೇಷ ಚೇತನ ಅಭ್ಯರ್ಥಿಗಳಿಗೆ	ರೂ. 250/-	

ಸೂಚನೆ:

i. **ಶುಲ್ಕ ಪಾವತಿಸುವ ಮೊದಲು ಅಗತ್ಯವಿರುವ ಎಲ್ಲಾ ಶೈಕ್ಷಣಿಕ ಅರ್ಹತೆ, ಮೀಸಲಾತಿ, ವಯೋಮಿತಿ, ಅನುಭವ ಹಾಗೂ ಇತರೆ ಎಲ್ಲಾ ಅರ್ಹತಾ ಷರತ್ತುಗಳನ್ನು ಸೂಕ್ಷ್ಮವಾಗಿ ಪರಿಶೀಲಿಸಿಕೊಂಡು ಶುಲ್ಕವನ್ನು ಪಾವತಿ ಮಾಡತಕ್ಕದ್ದು.**

8. ಪರೀಕ್ಷಾ ದಿನಾಂಕ:

ಪತ್ರಿಕೆ ವಿವರ	ದಿನಾಂಕ	ಸಮಯ
ಪತ್ರಿಕೆ-1	09.01.2027	ಬೆಳಿಗ್ಗೆ: 10.30 ರಿಂದ 12.30 ರವರೆಗೆ
ಪತ್ರಿಕೆ-2	09.01.2027	ಮಧ್ಯಾಹ್ನ: 2.30 ರಿಂದ 4.30 ರವರೆಗೆ
ಕನ್ನಡ ಭಾಷಾ ಪರೀಕ್ಷೆ	08.01.2027	ಮಧ್ಯಾಹ್ನ: 3.00 ರಿಂದ 5.00 ರವರೆಗೆ

9. ಸ್ಪರ್ಧಾತ್ಮಕ ಪರೀಕ್ಷಾ ವಿಧಾನ:

I. ಮೇಲ್ಕಂಡ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಯನ್ನು **ಆಫ್‌ಲೈನ್-ಓಎಂಆರ್ ಮಾದರಿ (Offline-OMR type)** ಯಲ್ಲಿ ನಡೆಸಲಾಗುವುದು.

II. **ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲಾಗುವ ಪರೀಕ್ಷಾ ಕೇಂದ್ರದ ವಿವರಗಳನ್ನು ನಂತರದಲ್ಲಿ ತಿಳಿಸಲಾಗುವುದು.** ಅಭ್ಯರ್ಥಿಗಳಿಗೆ ಪರೀಕ್ಷೆಯ ಪ್ರವೇಶ ಪತ್ರಗಳನ್ನು ಪ್ರಾಧಿಕಾರದ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಲು ಪ್ರಕಟಣೆಯ ಮೂಲಕ ತಿಳಿಸಲಾಗುವುದು ಹಾಗೂ ಈ ಬಗ್ಗೆ ಮಾಹಿತಿಯನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿಯೂ ಪ್ರಕಟಿಸಲಾಗುವುದು. ಅಭ್ಯರ್ಥಿಗಳು ಕಡ್ಡಾಯವಾಗಿ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡು ಒಂದು ಮೂಲ ಗುರುತಿನ ಚೀಟಿಯೊಂದಿಗೆ (ಪ್ಯಾನ್‌ಕಾರ್ಡ್ / ವಾಹನ ಚಾಲನಾ ಪರವಾನಗಿ / ಆಧಾರ್‌ಕಾರ್ಡ್ / ಪಾಸ್‌ಪೋರ್ಟ್ / ವೋಟರ್ ಐಡಿ / ಸರ್ಕಾರಿ ನೌಕರರ ಐಡಿ) ಪರೀಕ್ಷಾ ಕೇಂದ್ರಗಳಿಗೆ ಹೋಗಬೇಕು. ತಪ್ಪಿದ್ದಲ್ಲಿ ಪರೀಕ್ಷಾ ಕೇಂದ್ರವನ್ನು ಪ್ರವೇಶಿಸಲು ಅನುಮತಿಸಲಾಗುವುದಿಲ್ಲ.

(ಪರೀಕ್ಷಾ ಕೇಂದ್ರವನ್ನು ಯಾವುದೇ ಕಾರಣಕ್ಕೂ ಬದಲಾವಣೆ ಮಾಡಲು ಅವಕಾಶ ನೀಡಲಾಗುವುದಿಲ್ಲ).

10. ಕನ್ನಡ ಭಾಷಾ ಪರೀಕ್ಷೆ:

ಅಭ್ಯರ್ಥಿಯು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅಥವಾ ರಾಜ್ಯ ಸರ್ಕಾರವು ಅದಕ್ಕೆ ತತ್ಸಮಾನವೆಂದು ಘೋಷಿಸಿದ ಯಾವುದೇ ಪರೀಕ್ಷೆಯಲ್ಲಿ ಅಥವಾ ಎಸ್.ಎಸ್.ಎಲ್.ಸಿಗಿಂತ ಉನ್ನತ ಮಟ್ಟದ ಪರೀಕ್ಷೆಗಳಲ್ಲಿ ಕನ್ನಡ ವಿಷಯವನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯಾಗಿ ಅಭ್ಯಾಸ ಮಾಡಿದ್ದರೆ ಅಥವಾ ಕನ್ನಡ ಮಾಧ್ಯಮದಲ್ಲಿ ಅಧ್ಯಯನ ಮಾಡಿ ಇಂತಹ ಪರೀಕ್ಷೆಗಳನ್ನು ಪಾಸು ಮಾಡಿದ್ದರೆ ಅಥವಾ ಆಯೋಗ ಅಥವಾ ಇನ್ನಿತರ ಯಾವುದೇ ಆಯ್ಕೆ ಪ್ರಾಧಿಕಾರವು ಈ ಹಿಂದೆ ನಡೆಸಿದ ಕನ್ನಡ ಭಾಷೆಯ ಪರೀಕ್ಷೆಯಲ್ಲಿ (ಕಡ್ಡಾಯ ಕನ್ನಡ ಪರೀಕ್ಷೆ) ಉತ್ತೀರ್ಣರಾಗಿದ್ದರೆ, ಅಂತಹ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆಯಿಂದ ವಿನಾಯಿತಿ ನೀಡಲಾಗುತ್ತದೆ. ಇಲ್ಲವಾದಲ್ಲಿ, ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯು ಬಹು ಆಯ್ಕೆ ಮಾದರಿ ಪತ್ರಿಕೆಯಾಗಿದ್ದು, ಗರಿಷ್ಠ 150 ಅಂಕಗಳನ್ನು ಒಳಗೊಂಡಿರುತ್ತದೆ ಮತ್ತು ಅಭ್ಯರ್ಥಿಗಳು ಇದರಲ್ಲಿ ಅರ್ಹತೆ ಗಳಿಸಲು ಕನಿಷ್ಠ 50 ಅಂಕಗಳನ್ನು ಗಳಿಸತಕ್ಕದ್ದು. **ಗೈರು ಹಾಜರಾದ / ಕನಿಷ್ಠ 50 ಅಂಕಗಳನ್ನು ಗಳಿಸದ ಅಭ್ಯರ್ಥಿಗಳು ಆಯ್ಕೆ ಪ್ರಕ್ರಿಯೆಗೆ ಅರ್ಹರಾಗುವುದಿಲ್ಲ.** ಈ ಪ್ರಶ್ನೆಪತ್ರಿಕೆಯನ್ನು ಎಸ್.ಎಸ್.ಎಲ್.ಸಿ ಹಂತದಲ್ಲಿನ ಪ್ರಥಮ ಭಾಷೆ ಕನ್ನಡವನ್ನು ಮಾನದಂಡವನ್ನಾಗಿಟ್ಟುಕೊಂಡು ಸಿದ್ಧಪಡಿಸಲಾಗುವುದು. ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಜ್ಯೇಷ್ಠತೆಗೆ ಅಥವಾ ಹುದ್ದೆಗಳ ಆಯ್ಕೆಗೆ ಪರಿಗಣಿಸುವುದಿಲ್ಲ.

11. ಪ್ರಶ್ನೆ ಪತ್ರಿಕೆ ಹಾಗೂ ಪಠ್ಯಕ್ರಮ:

ಪತ್ರಿಕೆ	ವಿಷಯ	ಒಟ್ಟು ಪ್ರಶ್ನೆಗಳು	ಗರಿಷ್ಠ ಅಂಕಗಳು	ಅವಧಿ (ಗಂಟೆ)
ಪತ್ರಿಕೆ-1	ಸಾಮಾನ್ಯ ಜ್ಞಾನ:- (**ಎ**). ಪ್ರಚಲಿತ ಘಟನೆಗಳಿಗೆ ಸಂಬಂಧಿಸಿದ ವಿಷಯಗಳ ಸಾಮಾನ್ಯ ಜ್ಞಾನ; (**ಬಿ**). ಸಾಮಾನ್ಯ ವಿಜ್ಞಾನ ವಿಷಯಗಳು; (**ಸಿ**). ಭೂಗೋಳಶಾಸ್ತ್ರ ವಿಷಯಗಳು; (**ಡಿ**). ಸಮಾಜ ವಿಜ್ಞಾನ ವಿಷಯಗಳು; (**ಇ**). ಭಾರತೀಯ ಸಮಾಜ ಮತ್ತು ಅದರ ಬೆಳವಣಿಗೆಗಳ ಇತಿಹಾಸದ ವಿಷಯಗಳು; (**ಎಫ್**). ಭಾರತದ ಮತ್ತು ಕರ್ನಾಟಕದ ಇತಿಹಾಸ; (**ಜಿ**). ಭಾರತದ ಸಂವಿಧಾನ ಮತ್ತು ಸಾರ್ವಜನಿಕ ಆಡಳಿತ; (**ಎಚ್**). ಪ್ರಾಯೋಗಿಕ ಜ್ಞಾನ ಮತ್ತು ಬೌದ್ಧಿಕ ಸಾಮರ್ಥ್ಯದ ವಿಷಯಗಳು (ಎಸ್ಎಸ್ಎಲ್ಸಿ ಮಟ್ಟ); (**ಐ**). ಕರ್ನಾಟಕದ ಸಾಮಾಜಿಕ ಮತ್ತು ಸಾಂಸ್ಕೃತಿಕ ಇತಿಹಾಸದ ವಿಷಯಗಳು; (**ಜೆ**). ಸ್ವಾತಂತ್ರ್ಯ ನಂತರದಲ್ಲಿ ಕರ್ನಾಟಕದ ಭೂ ಸುಧಾರಣೆಗಳು ಮತ್ತು ಸಾಮಾಜಿಕ ಬದಲಾವಣೆಗಳ ವಿಷಯಗಳು; (**ಕೆ**). ಕರ್ನಾಟಕದ ಅರ್ಥವ್ಯವಸ್ಥೆ: ಅದರ ಸಾಮರ್ಥ್ಯ ಮತ್ತು ದೌರ್ಬಲ್ಯತೆ: ಪ್ರಸ್ತುತ ಸ್ಥಿತಿಗತಿ ಕುರಿತ ವಿಷಯಗಳು; (**ಎಲ್**). ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಸಂಸ್ಥೆಗಳು ಮತ್ತು ಗ್ರಾಮೀಣ ಸಹಕಾರ ಸಂಸ್ಥೆಗಳ ವಿಷಯಗಳು; (**ಎಂ**). ಕರ್ನಾಟಕ ಪರಿಣಾಮಕಾರಿ ಆಡಳಿತಕ್ಕಾಗಿ ವಿಜ್ಞಾನ ಮತ್ತು ತಂತ್ರಜ್ಞಾನದ ಪಾತ್ರ ಕುರಿತ ವಿಷಯಗಳು; (**ಎನ್**). ಕರ್ನಾಟಕದ ಪರಿಸರ ಸಂಬಂಧಿ ಸಮಸ್ಯೆಗಳು ಮತ್ತು ಅಭಿವೃದ್ಧಿ ಕುರಿತ ವಿಷಯಗಳು; (**ಓ**). ಬೌದ್ಧಿಕ ಸಾಮರ್ಥ್ಯದ ವಿಷಯಗಳು.	100	100	2 ಗಂಟೆ
ಪತ್ರಿಕೆ-2	(**ಎ**). ಸಾಮಾನ್ಯ ಕನ್ನಡ; (**ಬಿ**). ಸಾಮಾನ್ಯ ಇಂಗ್ಲೀಷ್; (**ಸಿ**). ಕಂಪ್ಯೂಟರ್ ಜ್ಞಾನ.	100	100	2 ಗಂಟೆ

ಸೂಚನೆ:-

i. **ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅಭ್ಯರ್ಥಿಯು ಅರ್ಹತೆಗಾಗಿ ಕನಿಷ್ಟ ಶೇ. 35 ರಷ್ಟು ಅಂಕಗಳನ್ನು ಗಳಿಸುವುದು ಕಡ್ಡಾಯವಾಗಿರುತ್ತದೆ**. ಕನಿಷ್ಠ ಅಂಕಗಳನ್ನು ಗಳಿಸದ ಅಭ್ಯರ್ಥಿಗಳು ಆಯ್ಕೆ ಪ್ರಕ್ರಿಯೆಗೆ ಅನರ್ಹರಾಗುತ್ತಾರೆ.

12. ಋಣಾತ್ಮಕ ಮೌಲ್ಯಮಾಪನ(Negative Evaluation):

i. ಸ್ಪರ್ಧಾತ್ಮಕ ಪರೀಕ್ಷೆಯ ಪ್ರಶ್ನೆಪತ್ರಿಕೆಯು ವಸ್ತುನಿಷ್ಠ ಬಹು ಆಯ್ಕೆ ಮಾದರಿಯಲ್ಲಿದ್ದು, ಪ್ರಶ್ನೆ ಪತ್ರಿಕೆಗಳಲ್ಲಿನ ಪ್ರತಿಯೊಂದು ಪ್ರಶ್ನೆಗೂ 04 ಪರ್ಯಾಯ ಉತ್ತರಗಳಿದ್ದು, ಅಭ್ಯರ್ಥಿಯು ಯಾವುದಾದರೂ ಒಂದು ಸರಿ ಉತ್ತರವನ್ನು ಮಾತ್ರ ಆಯ್ಕೆ ಮಾಡತಕ್ಕದ್ದು. ಪ್ರತಿ ತಪ್ಪು ಉತ್ತರಕ್ಕೆ, ಆ ಪ್ರಶ್ನೆಗೆ ನಿಗದಿಪಡಿಸಿರುವ ಅಂಕಗಳ ನಾಲ್ಕನೇ ಒಂದು ಭಾಗದಷ್ಟು (0.25) ಅಂಕಗಳನ್ನು ಕಳೆಯಲಾಗುವುದು.

ii. ಒ.ಎಂ.ಆರ್ ಉತ್ತರ ಪತ್ರಿಕೆಯಲ್ಲಿ 5ನೇ ಆಯ್ಕೆ / ವೃತ್ತವನ್ನು ನೀಡಿದ್ದು, ಉತ್ತರಿಸದೇ ಇರುವ ಪ್ರಶ್ನೆಗಳಿಗೆ ಐದನೇ ಆಯ್ಕೆ/ವೃತ್ತವನ್ನು ಶೇಡ್ ಮಾಡಲು ಕೊನೆಯ ಬೆಲ್ ಆದ ನಂತರ ಹೆಚ್ಚುವರಿಯಾಗಿ ಐದು ನಿಮಿಷಗಳನ್ನು ನೀಡಲಾಗುವುದು. ಯಾವುದೇ ಆಯ್ಕೆಯನ್ನು / ವೃತ್ತವನ್ನು ಶೇಡ್ ಮಾಡಿಲ್ಲದಿದ್ದರೆ, ಪ್ರತಿ ಪ್ರಶ್ನೆಗೆ ನಾಲ್ಕನೇ ಒಂದು ಭಾಗದಷ್ಟು (0.25) ಅಂಕಗಳನ್ನು ಕಡಿತಗೊಳಿಸಲಾಗುತ್ತದೆ.

13. ಆದ್ಯತೆಗಳು ಹಾಗೂ ಆಯ್ಕೆ ವಿಧಾನ:

a) **ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಒಟ್ಟು ಅಂಕಗಳ ಮೆರಿಟ್ ಆಧಾರದ ಮೇಲೆ, ಅಧಿಸೂಚಿತ ಹುದ್ದೆಗಳಿಗೆ ಅನ್ವಯಿಸುವ ಅರ್ಹತೆಯಂತೆ ಮತ್ತು ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳನ್ವಯ ಅಭ್ಯರ್ಥಿಗಳು ತಮ್ಮ ಆದ್ಯತಾನುಸಾರ ಹುದ್ದೆಗೆ ಆಯ್ಕೆ ಹೊಂದಲು ಅಭ್ಯರ್ಥಿಗಳಿಗೆ ಆನ್‌ಲೈನ್ ಕೌನ್ಸಲಿಂಗ್ ಮೂಲಕ ಆಯ್ಕೆ ಪ್ರಕ್ರಿಯೆಯನ್ನು ನಡೆಸಲಾಗುವುದು. <u>ಸದರಿ ಆನ್‌ಲೈನ್ ಕೌನ್ಸಲಿಂಗ್ ಪ್ರಕ್ರಿಯೆಯ ವಿವರವಾದ ಮಾಹಿತಿ ಹಾಗೂ ವೇಳಾಪಟ್ಟಿಯನ್ನು ಸ್ಪರ್ಧಾತ್ಮಕ ಪರೀಕ್ಷೆಯ ಫಲಿತಾಂಶ ಪ್ರಕಟಿಸಿದ ನಂತರದಲ್ಲಿ ಪ್ರತ್ಯೇಕವಾಗಿ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು</u>.**

b) ಆದ್ಯತೆಗಳನ್ನು ಸ್ಪರ್ಧಾತ್ಮಕ ಪರೀಕ್ಷೆಯ ಫಲಿತಾಂಶ ಪ್ರಕಟಣೆಗೊಂಡ ನಂತರ ಹುದ್ದೆಗಳ ಆಯ್ಕೆಗಳನ್ನು ಆನ್‌ಲೈನ್ ಮೂಲಕ ಅಭ್ಯರ್ಥಿಗಳು ಅವರುಗಳ ಲಾಗಿನ್ ಮೂಲಕ ಸಲ್ಲಿಸಲು ಅವಕಾಶ ನೀಡಲಾಗುವುದು. ಖುದ್ದಾಗಿ ಅಥವಾ ಅಂಚೆ ಮೂಲಕ ಆಯ್ಕೆಗಳನ್ನು ಸಲ್ಲಿಸಲು ಅವಕಾಶ ಇರುವುದಿಲ್ಲ.

c) ಆದ್ಯತೆಯನ್ನು ನೀಡುವ ಸಂದರ್ಭದಲ್ಲಿ ಸದರಿ ಹುದ್ದೆಗೆ ನಿಗದಿ ಪಡಿಸಿರುವ ಶೈಕ್ಷಣಿಕ ಅರ್ಹತೆ, ಮೀಸಲಾತಿ ಮತ್ತು ಇನ್ನಿತರ ಮಾನದಂಡಗಳನ್ವಯ ಆದ್ಯತೆಗಳನ್ನು ನೀಡುವುದು. ಒಂದು ವೇಳೆ ಸದರಿ ಹುದ್ದೆಗೆ ಅರ್ಹತೆ ಇಲ್ಲದಿದ್ದರೂ ಸಹ ತಪ್ಪಾಗಿ ಆದ್ಯತೆಯನ್ನು ನಮೂದಿಸಿದರೆ ಅಭ್ಯರ್ಥಿಯೇ ನೇರ ಹೊಣೆಗಾರರಾಗುತ್ತಾರೆ ಹಾಗೂ ನಂತರದಲ್ಲಿ ದಾಖಲಾತಿಗಳ ಪರಿಶೀಲನೆಯಲ್ಲಿ ಅರ್ಹತೆ ಇಲ್ಲ ಎಂಬ ಕಾರಣದಿಂದ ಅಭ್ಯರ್ಥಿತನ ತಿರಸ್ಕೃತವಾದರೆ, ಅದರಿಂದ ಉಂಟಾಗುವ ಎಲ್ಲಾ ಪರಿಣಾಮಗಳಿಗೆ ಅಭ್ಯರ್ಥಿಯೇ ಸಂಪೂರ್ಣ ಜವಾಬ್ದಾರರಾಗಿರುತ್ತಾರೆ.

d) ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗಾಗಿ ಅನ್ವಯಿಸುವ ಶೈಕ್ಷಣಿಕ ಅರ್ಹತಾ ಅಂಕಪಟ್ಟಿ / ಪ್ರಮಾಣ ಪತ್ರಗಳು ಹಾಗೂ ಮೀಸಲಾತಿ ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ಹೊಂದಿರತಕ್ಕದ್ದು. ಮೀಸಲಾತಿ ಪ್ರಮಾಣ ಪತ್ರಗಳನ್ನು ನಿಗದಿತ ನಮೂನೆಯಲ್ಲಿ ಸಕ್ಷಮ ಪ್ರಾಧಿಕಾರ / ಸಂಬಂಧಪಟ್ಟ ಅಧಿಕಾರಿಯವರಿಂದ ಪಡೆದಿಟ್ಟುಕೊಂಡಿರಬೇಕು. ಪ್ರಾಧಿಕಾರದ ಹಂತದಲ್ಲಿ ಅಭ್ಯರ್ಥಿಗಳ ಮೂಲ ದಾಖಲೆಗಳನ್ನು ಪರಿಶೀಲನೆ ಮಾಡಲಾಗುವುದಿಲ್ಲ, ಅಭ್ಯರ್ಥಿಗಳು ಆಯ್ಕೆ ಹೊಂದುವ ನೇಮಕಾತಿ ಪ್ರಾಧಿಕಾರದಲ್ಲಿ ನಿಯಮಾನುಸಾರ ಮೂಲ ದಾಖಲೆಗಳು ಪರಿಶೀಲನೆಗೆ ಒಳಪಡುತ್ತವೆ. ಆದ್ದರಿಂದ ಅರ್ಜಿ ಸಲ್ಲಿಸುವಾಗ ಸರಿಯಾದ ಮಾಹಿತಿಯನ್ನು ತುಂಬಬೇಕು;

e) ಹುದ್ದೆಗಳ ಆಯ್ಕೆಗಾಗಿ ಅಭ್ಯರ್ಥಿಯು ಅರ್ಹತೆ ಪಡೆಯಲು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಕನಿಷ್ಟ ಶೇ. 35 ರಷ್ಟು ಅಂಕಗಳನ್ನು ಗಳಿಸುವುದು ಕಡ್ಡಾಯವಾಗಿದ್ದು, ಅದರಂತೆ ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಶೇ. 35 ರಷ್ಟು ಮತ್ತು ಅದಕ್ಕಿಂತ ಹೆಚ್ಚಿನ ಅಂಕಗಳನ್ನು ಗಳಿಸಿರುವ, ಒಟ್ಟು ಅಂಕಗಳ ಶೇಕಡಾವಾರು ಪ್ರಮಾಣದ ಆಧಾರದ ಮೇಲೆ ಮೆರಿಟ್ / ರ‍್ಯಾಂಕ್ (rank) ನೀಡಲಾಗುವುದು;

f) ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಇಬ್ಬರು ಅಥವಾ ಹೆಚ್ಚಿನ ಅಭ್ಯರ್ಥಿಗಳು ಸಮಾನ ಅಂಕಗಳನ್ನು ಪಡೆದರೆ, ಅಂತಹ ಅಭ್ಯರ್ಥಿಗಳ ಅರ್ಹತೆಯ ಕ್ರಮವನ್ನು ಅವರ ವಯಸ್ಸಿನ ಆಧಾರದ ಮೇಲೆ ನಿಗದಿಪಡಿಸಲಾಗುವುದು, ವಯಸ್ಸಿನಲ್ಲಿ ಹಿರಿಯರಾದ ಅಭ್ಯರ್ಥಿಯನ್ನು ಅರ್ಹತಾ ಕ್ರಮದಲ್ಲಿ ಮೇಲಿನ ಸ್ಥಾನದಲ್ಲಿಡಲಾಗುವುದು. ಒಂದು ವೇಳೆ ಅಂಕಗಳು ಹಾಗೂ ವಯಸ್ಸು ಒಂದೇ ಇರುವ ಅಭ್ಯರ್ಥಿಗಳಿದ್ದರೆ, ಹುದ್ದೆಗೆ ನಿಗದಿಪಡಿಸಿದ ಅರ್ಹತಾ ಪರೀಕ್ಷೆಯಲ್ಲಿ ಹೆಚ್ಚಿನ ಅಂಕಗಳನ್ನು ಪಡೆದಿರುವ ಅಭ್ಯರ್ಥಿಯನ್ನು ಅರ್ಹತಾ ಕ್ರಮದಲ್ಲಿ ಮೇಲಿನ ಸ್ಥಾನದಲ್ಲಿಡಲಾಗುವುದು.

g) ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ ದಾಖಲಿಸಿರುವ ವೈಯಕ್ತಿಕ ಮಾಹಿತಿ, ಕ್ಲೇಮ್ ಮಾಡಿರುವ ವಿವಿಧ ಮೀಸಲಾತಿಗಳು(ಲಂಬ ಮತ್ತು ಸಮತಳ) ಹಾಗೂ ಈ ಅಧಿಸೂಚನೆಯಲ್ಲಿನ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳು ಹಾಗೂ ಕರ್ನಾಟಕ ನಾಗರಿಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು, 2021 ಹಾಗೂ ಅದರ ತಿದ್ದುಪಡಿ ನಿಯಮಗಳನ್ವಯ, ಪ್ರಾಧಿಕಾರದಿಂದ ದಿನಾಂಕ: 29.10.2026 ರಂದು ಹೊರಡಿಸಲಾಗಿರುವ (ಸಂಖ್ಯೆ: ಇಡಿ/ಕೆಇಎ/14/ನೇಪಿ/2026(RPC), ಸಂಖ್ಯೆ: ಇಡಿ/ಕೆಇಎ/16/ನೇಪಿ/2026(RPC) ಹಾಗೂ ಸಂಖ್ಯೆ: ಇಡಿ/ಕೆಇಎ/17/ನೇಪಿ/2026(ಕೆಕೆ)) ಅಧಿಸೂಚನೆಗಳಲ್ಲಿನ ವಿವಿಧ ಇಲಾಖೆಗಳಲ್ಲಿನ ಪದವಿ ಮಟ್ಟದ ಸಮಾನ ಹುದ್ದೆಗಳು ಮತ್ತು ಒಂದೇ ಪಠ್ಯಕ್ರಮ ಇರುವ ಹುದ್ದೆಗಳು ಹಾಗೂ ಅದೇ ರೀತಿಯಲ್ಲಿ ವಿವಿಧ ಇಲಾಖೆಗಳಲ್ಲಿನ

ದ್ವಿತೀಯ ಪಿಯುಸಿ ಮಟ್ಟದ ಸಮಾನ ಹುದ್ದೆಗಳು ಮತ್ತು ಒಂದೇ ಪಠ್ಯಕ್ರಮ ಇರುವ ಹುದ್ದೆಗಳಲ್ಲಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ, ಶುಲ್ಕ ಪಾವತಿಸಿ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗಿ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳು ಹಾಗೂ ಸದರಿ ಎಲ್ಲಾ ಅಧಿಸೂಚನೆಗಳಲ್ಲಿನ ಹುದ್ದೆಗಳ ಮೆರಿಟ್ / ರ‍್ಯಾಂಕ್ (rank) ಮಾಹಿತಿಯನ್ನು ಒಳಗೊಂಡ **"ಅಭ್ಯರ್ಥಿ ಪರಿಶೀಲನಾ ಚೀಟಿ" (Candidate Verification Slip)**ಯನ್ನು ಸ್ಪರ್ಧಾತ್ಮಕ ಪರೀಕ್ಷೆಯ ಫಲಿತಾಂಶ ಪ್ರಕಟಗೊಂಡ ನಂತರದಲ್ಲಿ ಪ್ರಾಧಿಕಾರದ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಬೇಕು;

h) **"ಅಭ್ಯರ್ಥಿ ಪರಿಶೀಲನಾ ಚೀಟಿ" (Candidate Verification Slip) ಯಲ್ಲಿ ತೋರಿಸಿರುವ ಮೀಸಲಾತಿ ಕ್ಲೇಮ್‌ಗಳನ್ನು ಯಥಾವತ್ತಾಗಿ ಆನ್‌ಲೈನ್ ಹುದ್ದೆ ಹಂಚಿಕೆ / ಆಯ್ಕೆಗೆ ಪರಿಗಣಿಸಲಾಗುವುದು.** ಆದಕಾರಣ, ಅಭ್ಯರ್ಥಿಗಳು ಆನ್‌ಲೈನ್ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ತಮ್ಮ ಬಳಿ ಅರ್ಹ ಮೀಸಲಾತಿ (ಲಂಬ ಮತ್ತು ಸಮತಳ) ಪ್ರಮಾಣ ಪತ್ರಗಳು ಇಲ್ಲದಿದ್ದರೂ ಸಹ ಆನ್‌ಲೈನ್ ಅರ್ಜಿ ಸಲ್ಲಿಸುವಾಗ ತಪ್ಪಾಗಿ ಮೀಸಲಾತಿಯನ್ನು ನಮೂದಿಸಿದ್ದಲ್ಲಿ ಅಥವಾ ಕ್ಲೇಮ್ ಮಾಡಿದ್ದಲ್ಲಿ, ಅಂತಹ ಮೀಸಲಾತಿಯನ್ನು ಮಾತ್ರ "ಅಭ್ಯರ್ಥಿ ಪರಿಶೀಲನಾ ಚೀಟಿ" (Candidate Verification Slip) ನಲ್ಲಿ ಅಳಿಸಿಹಾಕಲು(delete) ಮಾತ್ರ ಅಭ್ಯರ್ಥಿಗಳಿಗೆ "ಅಣುಕು ಹುದ್ದೆ ಹಂಚಿಕೆ / ಆಯ್ಕೆ" ಆರಂಭವಾಗುವ ಪೂರ್ವದಲ್ಲಿ ಅವಕಾಶ ನೀಡಲಾಗುವುದು, ತದನಂತರದಲ್ಲಿ ತಪ್ಪಾಗಿ ಕ್ಲೇಮ್ ಮಾಡಿದ ಮೀಸಲಾತಿಯನ್ನು ಅಳಿಸಿಹಾಕಲು(delete) ಸಹ ಅವಕಾಶ ಇರುವುದಿಲ್ಲ.

i) **ಅಭ್ಯರ್ಥಿಗಳು ಆನ್‌ಲೈನ್ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಕ್ಲೇಮ್ ಮಾಡಿರುವ ಮೀಸಲಾತಿಯನ್ನು ಹೊರತುಪಡಿಸಿ ಯಾವುದೇ ಮೀಸಲಾತಿಯನ್ನು ಹೊಸದಾಗಿ ಸೇರ್ಪಡೆ ಮಾಡಲು ಅಥವಾ ಕ್ಲೇಮ್ ಮಾಡಲು ಅವಕಾಶ ಇರುವುದಿಲ್ಲ.**

j) **ಅಧಿಸೂಚಿತ ಹುದ್ದೆಗಳಿಗೆ ಹುದ್ದೆಯ ಆಯ್ಕೆಯನ್ನು ಅರ್ಹತೆ, ಮೀಸಲಾತಿ ಹಾಗೂ ಮೆರಿಟ್ ಆಧಾರದ ಮೇಲೆ ಅಭ್ಯರ್ಥಿಗಳು ನಮೂದಿಸಿದ ಆದ್ಯತೆಯ ಆಧಾರದ ಮೇಲೆ ಆನ್‌ಲೈನ್ ತಂತ್ರಾಂಶದ ಕೌನ್ಸಲಿಂಗ್ ಮೂಲಕ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುತ್ತದೆ.**

k) **ಅಭ್ಯರ್ಥಿಗಳು ನಮೂದಿಸಿರುವ ಸೇವೆಗಳು ಅಥವಾ ಹುದ್ದೆಯ ಆದ್ಯತೆಯ ಆಧಾರದ ಮೇಲೆ ಮತ್ತು ಅಭ್ಯರ್ಥಿಗಳು ಗಳಿಸಿರುವ ಮೆರಿಟ್ ಮತ್ತು ಅಧಿಸೂಚಿತ ಹುದ್ದೆಗಳ ಮೀಸಲಾತಿ ಅನುಸಾರ ಒಂದು "ಅಣುಕು ಹುದ್ದೆ ಹಂಚಿಕೆ / ಆಯ್ಕೆ" ಪ್ರಕ್ರಿಯೆಯ ಫಲಿತಾಂಶವನ್ನು ಪ್ರಕಟಿಸಲಾಗುವುದು. ಅಣುಕು ಹುದ್ದೆಯ ಹಂಚಿಕೆ / ಆಯ್ಕೆ ಪ್ರಕ್ರಿಯೆಯ ನಂತರ ತಮ್ಮ ಆದ್ಯತೆಗಳನ್ನು ಪರಿಷ್ಕರಿಸಲು / ಸೇರಿಸಲು / ಅಳಿಸಲು / ಬದಲಾಯಿಸಲು / ಮಾರ್ಪಡಿಸಲು ಕಾಲಾವಕಾಶ ನೀಡಲಾಗುವುದು(**ಈ ಅಣುಕು ಹುದ್ದೆಯ ಹಂಚಿಕೆ / ಆಯ್ಕೆ ಪ್ರಕ್ರಿಯೆಯಲ್ಲಿ ಹಂಚಿಕೆ / ಆಯ್ಕೆಯಾದ ಸೇವೆಯ ಅಥವಾ ಹುದ್ದೆಯ ಆಯ್ಕೆಯು, ಅಂತಿಮ ಸೇವೆಯ ಅಥವಾ ಹುದ್ದೆಯ ಹಂಚಿಕೆಯ ಪ್ರಕ್ರಿಯೆಯಲ್ಲಿ ಸಿಗಬಹುದು ಅಥವಾ ಸಿಗದಿರಬಹುದು. ಆದರೆ ಈ ಅಣುಕು ಹುದ್ದೆಯ ಹಂಚಿಕೆ / ಆಯ್ಕೆ ಪ್ರಕ್ರಿಯೆಯು ಅಭ್ಯರ್ಥಿಗಳು ಈಗಾಗಲೇ ನಮೂದಿಸಿರುವ ತಮ್ಮ ಆದ್ಯತೆಗಳನ್ನು ಪರಿಷ್ಕರಿಸಲು, ಅಪ್‌ಡೇಟ್ ಮಾಡಲು, ಸೇರ್ಪಡೆ ಮಾಡಲು ಅಥವಾ ಕೈಬಿಡಲು ಸಹಾಯ ಮಾಡುತ್ತದೆ).**

l) ಕರ್ನಾಟಕ ನಾಗರಿಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು, 2021 ಹಾಗೂ ಅದರ ತಿದ್ದುಪಡಿ ನಿಯಮಗಳನ್ವಯ, ಈ ಅಧಿಸೂಚನೆಯಲ್ಲಿನ ಹುದ್ದೆಗಳು ಹಾಗೂ ಪ್ರಾಧಿಕಾರದಿಂದ ದಿನಾಂಕ: 29.10.2026 ರಂದು ಹೊರಡಿಸಲಾಗಿರುವ **(ಸಂಖ್ಯೆ: ಇಡಿ/ಕೆಇಎ/14/ನೇವಿ/2026(RPC), ಸಂಖ್ಯೆ: ಇಡಿ/ಕೆಇಎ/16/ ನೇವಿ/2026(RPC) ಹಾಗೂ ಸಂಖ್ಯೆ: ಇಡಿ/ಕೆಇಎ/17/ನೇವಿ/2026(ಕೆಕೆ))** ಅಧಿಸೂಚನೆಗಳಲ್ಲಿನ ವಿವಿಧ ಇಲಾಖೆಗಳಲ್ಲಿನ ಪದವಿ ಮಟ್ಟದ ಸಮಾನ ಹುದ್ದೆಗಳು ಮತ್ತು ಒಂದೇ ಪಠ್ಯಕ್ರಮ ಇರುವ ಹಾಗೂ ವಿವಿಧ ಇಲಾಖೆಗಳಲ್ಲಿನ ದ್ವಿತೀಯ ಪಿಯುಸಿ ಮಟ್ಟದ ಸಮಾನ ಹುದ್ದೆಗಳು ಮತ್ತು ಒಂದೇ ಪಠ್ಯಕ್ರಮ ಇರುವ, ಅಧಿಸೂಚಿಸಲಾದ ಸೇವೆಗಳು ಅಥವಾ ಹುದ್ದೆಗಳಿಗೆ ಅಭ್ಯರ್ಥಿಗಳು ದಾಖಲಿಸುವ ಆದ್ಯತೆಯನ್ನು ಪರಿಗಣಿಸಿ, ಅಧಿಸೂಚಿತ ಹುದ್ದೆಗಳಿಗೆ ಅನ್ವಯಿಸುವ ಶೈಕ್ಷಣಿಕ ಅರ್ಹತೆ, ಮೀಸಲಾತಿ ಮತ್ತು ಇನ್ನಿತರ ಮಾನದಂಡಗಳನ್ವಯ ಹಾಗೂ ಮೆರಿಟ್ ಆಧಾರದ ಮೇಲೆ ಅಭ್ಯರ್ಥಿಯ ಆದ್ಯತೆಯನುಸಾರ ಒಂದು ಹುದ್ದೆಗೆ ಮಾತ್ರ ಆಯ್ಕೆ ಹೊಂದಲು ಆನ್‌ಲೈನ್ ತಂತ್ರಾಂಶದ ಕೌನ್ಸಲಿಂಗ್‌ನಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ;

m) **"ಅಣುಕು ಹುದ್ದೆ ಹಂಚಿಕೆ / ಆಯ್ಕೆಯ" ಪ್ರಕ್ರಿಯೆಯು ಮುಕ್ತಾಯವಾದ ನಂತರದಲ್ಲಿ, ಅಭ್ಯರ್ಥಿಗಳು ತಮ್ಮ ಆದ್ಯತೆಯಂತೆ ನೈಜ್ಯವಾಗಿ ಹಂಚಿಕೆ / ಆಯ್ಕೆ ಹೊಂದಿರುವ**

ಹುದ್ದೆಗೆ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಒಟ್ಟು ಅಂಕಗಳ ಮೆರಿಟ್, ಆಯಾ ಹುದ್ದೆಗೆ ಅನ್ವಯಿಸುವ ಅರ್ಹತೆಯಂತೆ ಮತ್ತು ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳನ್ವಯ ಪ್ರಕಟಿಸಿರುವ ಖಾಲಿ ಹುದ್ದೆಗಳಿಗೆ 1:1 ಅನುಪಾತದಲ್ಲಿ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗುವುದು.

n) ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಿದ ನಂತರದಲ್ಲಿ, ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಿ, ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರಿಗೆ / ನೇಮಕಾತಿ ಪ್ರಾಧಿಕಾರಗಳಿಗೆ ಮುಂದಿನ ನೇಮಕಾತಿ ಪ್ರಕ್ರಿಯೆ ಕೈಗೊಳ್ಳಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಕಳುಹಿಸಿಕೊಡಲಾಗುವುದು.

o) ಕರ್ನಾಟಕ ನಾಗರಿಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು, 2021 ರನ್ವಯ ಅಂತಿಮ ಆಯ್ಕೆ ಪಟ್ಟಿಯೊಂದಿಗೆ ಹೆಚ್ಚುವರಿ ಪಟ್ಟಿಯನ್ನು ಸಹ ಪ್ರಕಟಿಸಲಾಗುವುದು;

p) ಕರ್ನಾಟಕ ನಾಗರಿಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು, 2021 ಹಾಗೂ ಅದರ ತಿದ್ದುಪಡಿ ನಿಯಮಗಳನ್ವಯ ಆಯ್ಕೆ ಪ್ರಾಧಿಕಾರವು ಸಲ್ಲಿಸಿರುವ ಅಂತಿಮ ಆಯ್ಕೆ ಪಟ್ಟಿಯನುಸಾರ ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರು / ನೇಮಕಾತಿ ಪ್ರಾಧಿಕಾರಗಳು ಕರ್ನಾಟಕ ಸಿವಿಲ್ ಸೇವೆಗಳ (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರ ಅನುಸಾರ ಅಭ್ಯರ್ಥಿತನವನ್ನು ಪರಿಶೀಲಿಸಿ, ಯಾವುದೇ ಅಭ್ಯರ್ಥಿಗಳು ಹಂಚಿಕೆ ಮಾಡಿರುವ ಹುದ್ದೆಗೆ ಅರ್ಹತೆಯನ್ನು ಹೊಂದಿಲ್ಲದೆ ಅನರ್ಹರೆಂದು ಕಂಡುಬಂದಲ್ಲಿ ಅಥವಾ ನಿಗದಿತ ಸೇರಿಕೆ ಕಾಲ ಮಿತಿಯೊಳಗೆ ಅಥವಾ ಅನುಮತಿಸಬಹುದಾದ ವಿಸ್ತರಿಸಿದ ಕಾಲಮಿತಿಯೊಳಗೆ ಕರ್ತವ್ಯಕ್ಕೆ ಹಾಜರಾಗಲು ವಿಫಲರಾದಲ್ಲಿ, ಅಂತಹ ಅಭ್ಯರ್ಥಿಗಳ ಬದಲಿಗೆ, ಖಾಲಿ ಉಳಿದ ಹುದ್ದೆಗಳಿಗೆ ಹೆಚ್ಚುವರಿ ಪಟ್ಟಿಯಲ್ಲಿನ ಅಭ್ಯರ್ಥಿಗಳನ್ನು ಮಾತ್ರ ಭರ್ತಿ ಮಾಡಬೇಕಾಗಿರುತ್ತದೆ. (ಆಯ್ಕೆ ಪಟ್ಟಿಯಲ್ಲಿ ಸ್ಥಾನ ಪಡೆದ ಅಭ್ಯರ್ಥಿಗಳ ಹೆಸರನ್ನು ಹೆಚ್ಚುವರಿ ಪಟ್ಟಿಯಲ್ಲಿ ಪರಿಗಣಿಸಲು ಬರುವುದಿಲ್ಲ ಹಾಗೂ ಆಯ್ಕೆ ಪ್ರಾಧಿಕಾರವು ಈಗಾಗಲೇ ಇತರ ನೇಮಕಾತಿ ಪ್ರಾಧಿಕಾರಗಳಿಗೆ ಸಲ್ಲಿಸಿರುವ ಆಯ್ಕೆ ಪಟ್ಟಿಯಲ್ಲಿನ ಅಭ್ಯರ್ಥಿಗಳನ್ನು ಪರಿಗಣಿಸುವುದಿಲ್ಲ). ಅಂತಹ ಖಾಲಿ ಹುದ್ದೆಗೆ ನಿಯಮಾನುಸಾರ ಹೆಚ್ಚುವರಿ ಪಟ್ಟಿಯಲ್ಲಿನ ಅಭ್ಯರ್ಥಿಗಳನ್ನು ಮಾತ್ರ ಪರಿಗಣಿಸಲಾಗುವುದು.

14. ಅರ್ಹತಾ ಷರತ್ತುಗಳು:

i. ಭಾರತೀಯ ನಾಗರಿಕನಾಗಿರತಕ್ಕದ್ದು.

ii. ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

iii. ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

iv. ದೈಹಿಕವಾಗಿ ಅನರ್ಹರಾಗಿದ್ದಾರೆಂಬ ವೈದ್ಯಕೀಯ ಮಂಡಳಿಯ ವರದಿಯ ಆಧಾರದ ಮೇಲೆ ಅನರ್ಹರಾಗಿದ್ದಾರೆಂದು ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

v. ಕೇಂದ್ರ ಅಥವಾ ಕರ್ನಾಟಕ ರಾಜ್ಯ ಅಥವಾ ಇತರೆ ರಾಜ್ಯದ ಲೋಕಸೇವಾ ಆಯೋಗ ಅಥವಾ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಅಥವಾ ಯಾವುದೇ ನೇಮಕಾತಿ ಪರೀಕ್ಷೆಗಳಿಂದ ಖಾಯಂ ಆಗಿ ಡಿಬಾರ್ ಆದ ವ್ಯಕ್ತಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

vi. ಯಾವುದೇ ನೈತಿಕ ಪರಿಭಾಷೆಗೆ ಶಿಕ್ಷೆಗೆ ಒಳಪಟ್ಟ ವ್ಯಕ್ತಿ ಅಥವಾ ಕೇಂದ್ರ ಅಥವಾ ಕರ್ನಾಟಕ ರಾಜ್ಯ ಅಥವಾ ಇತರೆ ರಾಜ್ಯದ ಲೋಕಸೇವಾ ಆಯೋಗ ಅಥವಾ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಅಥವಾ ಯಾವುದೇ ನೇಮಕಾತಿಗಳಿಂದ ತಾತ್ಕಾಲಿಕವಾಗಿ ಡಿಬಾರ್ ಆದ ಅಥವಾ ಅನರ್ಹಗೊಂಡ ವ್ಯಕ್ತಿಯು ಸರ್ಕಾರವು ಎಲ್ಲಾ ಸಂದರ್ಭಗಳನ್ನು ಮರುಪರಿಶೀಲಿಸಿ ಅವರು ನೇಮಕಾತಿಗೆ ಅರ್ಹರೆಂದು ಪರಿಗಣಿಸುವವರೆಗೂ ನೇಮಕಾತಿಗೆ ಅರ್ಹರಾಗುವುದಿಲ್ಲ.

ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

15. ಜಾತಿ / ಮೀಸಲಾತಿ ಪ್ರಮಾಣ ಪತ್ರಗಳು:

ಮೀಸಲಾತಿ ಕೋರುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಿತ ತಹಶೀಲ್ದಾರ್ ರವರಿಂದ ಅಂದರೆ ತಹಶೀಲ್ದಾರ್ ರವರ ಸಹಿ ಮತ್ತು ಮೊಹರು ಅಥವಾ ಬಾರ್‌ಕೋಡ್, ಹಾಲೋಗ್ರಾಮ್ ಮತ್ತು ವಾಟರ್ ಮಾರ್ಕ್‌ನೊಂದಿಗೆ (RD ಸಂಖ್ಯೆ ಇರುವ ಪ್ರಮಾಣ ಪತ್ರ ಹೊಂದಿರತಕ್ಕದ್ದು) ಪಡೆದಿಟ್ಟುಕೊಂಡು, ಆನ್‌ಲೈನ್ **ಅರ್ಜಿ ಸಲ್ಲಿಸುವಾಗ ಅಭ್ಯರ್ಥಿಯು ಸರಿಯಾದ RD ಸಂಖ್ಯೆಯನ್ನು ನಮೂದಿಸತಕ್ಕದ್ದು** ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ಒಂದು ವೇಳೆ **ತಪ್ಪಾದ ಅಥವಾ ಬೇರೆ ಅಭ್ಯರ್ಥಿಯ RD ಸಂಖ್ಯೆಯನ್ನು ನಮೂದಿಸಿ, ಅಭ್ಯರ್ಥಿಯು ಅನರ್ಹಗೊಂಡಲ್ಲಿ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ.**

1. ಪರಿಶಿಷ್ಟ ಜಾತಿ (ಪ್ರವರ್ಗ-ಎ, ಪ್ರವರ್ಗ-ಬಿ ಮತ್ತು ಪ್ರವರ್ಗ-ಸಿ ಪ್ರಮಾಣ ಪತ್ರವನ್ನು ಪಡೆದು, ಆನ್‌ಲೈನ್ ಅರ್ಜಿಯಲ್ಲಿ RD ಸಂಖ್ಯೆಯನ್ನು ನಮೂದಿಸತಕ್ಕದ್ದು) ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು - **ನಮೂನೆ 'ಡಿ'**;
2. ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳು - **ನಮೂನೆ 'ಇ'**;
3. ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು - **ನಮೂನೆ 'ಎಫ್'**.

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ರದ್ದಾಗುವವರೆಗೂ ಚಾಲ್ತಿಯಲ್ಲಿರುವುದರಿಂದ (**RD ಸಂಖ್ಯೆ ಇರುವ ಪ್ರಮಾಣ ಪತ್ರ ಹೊಂದಿರತಕ್ಕದ್ದು**) ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ನಿಗದಿಪಡಿಸಿದ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. ಇತರೆ ಹಿಂದುಳಿದ ವರ್ಗಗಳ ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ವರ್ಗದ ಮೀಸಲಾತಿ ಪ್ರಮಾಣ ಪತ್ರಗಳು 5 ವರ್ಷ ಚಾಲ್ತಿಯಲ್ಲಿರುತ್ತವೆ. ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು.

ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದಾಗ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ನೇಮಕಾತಿ ಪ್ರಾಧಿಕಾರಕ್ಕೆ ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯು ರದ್ದಾಗುವುದು (ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗಿದೆ). ಈ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಳ್ಳುತ್ತವೆ.

ವಿಶೇಷ ಸೂಚನೆ:- ಸರ್ಕಾರದ ಆದೇಶ ಸಂಖ್ಯೆ: ಸಕಇ 179 ಬಿಸಿಎ 2010, ದಿನಾಂಕ: 16.07.2011 ರಲ್ಲಿ ತಿಳಿಸಿರುವಂತೆ, ಸರ್ಕಾರಿ ಆದೇಶ ಸಂಖ್ಯೆ: ಸಕಇ 225 ಬಿಸಿಎಂ 2000, ದಿನಾಂಕ: 30.03.2002 ಕ್ರಮ ಸಂಖ್ಯೆ: 3 (ಎ ಯಿಂದ ಎಮ್ ವರೆಗೆ) ಪ್ರವರ್ಗ 3ಎ ದಲ್ಲಿರುವ ಸದರಿ "ಬಲಿಜ" ಮತ್ತು ಉಪ ಜಾತಿಗಳಾದ ಬಲಜಿಗ / ಬಣಜಿಗ / ಗೌಡಬಣಜಿಗ, ನಾಯ್ಡು, ತೆಲಗ ಬಲಿಜ / ತೆಲಗ ಬಣಜಿಗ / ಶೆಟ್ಟಿ ಬಲಿಜ, ಶೆಟ್ಟಿ ಬಣಜಿಗ / ಬಣಜಿಗ ಶೆಟ್ಟಿ, ದಾಸರ ಬಲಿಜ / ದಾಸರ ಬಲಜಿಗ / ದಾಸರ ಬಣಜಿಗ / ದಾಸಬಣಜಿಗ, ಕಸ್ವನ್, ಮುನ್ನೂರ / ಮುನ್ನಾರ್ / ಮುನ್ನೂಕಾಪ್ಪು, ಬಳಿಗಾರ / ಬಳೆ ಬಣಜಿಗ / ಬಳೆಬಲಜಿಗ / ಬಳಿ ಜೆಟ್ಟಿ / ಬಣಗಾರ, ರೆಡ್ಡಿ(ಬಲಿಜ), ಜನಪ್ಪನ್, ಉಪ್ಪಾರ(ಬಲಿಜ), ತುಳೇರು(ಬಲಿಜ) ಜನಾಂಗವನ್ನು ಸಂವಿಧಾನದ ಅನುಚ್ಛೇದ 15(4) ಶಿಕ್ಷಣ ಸಲುವಾಗಿ ಮಾತ್ರ ಮೀಸಲಾತಿ ಪಡೆಯಲು ಮೇಲ್ಕಂಡ ಆದೇಶ ದಿನಾಂಕ 30.03.2002 ರ ಪಟ್ಟಿಯಲ್ಲಿ ಪ್ರವರ್ಗ-3(ಎ) ಯಿಂದ ಪ್ರವರ್ಗ-2(ಎ) ಗೆ ಸೇರಿಸಲಾಗಿದೆ. ಆದರೆ ಅನುಚ್ಛೇದ 16(4) ಉದ್ಯೋಗದ ಸಲುವಾಗಿ ಈಗಿರುವಂತೆ ಪ್ರವರ್ಗ-3(ಎ) ದಲ್ಲಿ ಮೀಸಲಾತಿ ಪಡೆಯಲು ಬಲಿಜ ಮತ್ತು ಅದರ ಉಪಜಾತಿಗಳನ್ನು ಮುಂದುವರೆಸಲಾಗಿದೆ. **ಆದ್ದರಿಂದ ಸದರಿ ಆದೇಶದನುಸಾರ ಸದರಿ ಜಾತಿ / ಉಪಜಾತಿಯ ಅಭ್ಯರ್ಥಿಗಳು ಉದ್ಯೋಗದಲ್ಲಿನ ಮೀಸಲಾತಿಗಾಗಿ ಆನ್‌ಲೈನ್ ಅರ್ಜಿಯಲ್ಲಿ ಕಡ್ಡಾಯವಾಗಿ 3(ಎ) ಮೀಸಲಾತಿ ಕೋರತಕ್ಕದ್ದು ಹಾಗೂ ಶಿಕ್ಷಣದ**

ಸಲುವಾಗಿ ಪಡೆದ 2(ಎ) ಮೀಸಲಾತಿ ಪ್ರಮಾಣ ಪತ್ರವನ್ನು ಪರಿಗಣಿಸಲು ಬರುವುದಿಲ್ಲ.

(ಇತರೆ ಹಿಂದುಳಿದ ವರ್ಗಗಳಾದ ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ವರ್ಗದ ವಿವಾಹಿತ ಮಹಿಳಾ ಅಭ್ಯರ್ಥಿಗಳು ತಮ್ಮ ಪತಿಯ ಹೆಸರಿನೊಂದಿಗೆ ಜಾರಿಯಾದ ಆದಾಯ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಗೊಳಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡು ಅರ್ಜಿಯಲ್ಲಿ ಮೀಸಲಾತಿ ಕೋರತಕ್ಕದ್ದು).

16. ಮಾಜಿ ಸೈನಿಕ:

ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೌಕರಿ ಭರ್ತಿ) ನಿಯಮಗಳು, 1977 ರನ್ವಯ ಮಾಜಿ ಸೈನಿಕರ ವಿವರಣೆ ಕೆಳಕಂಡಂತಿದೆ:

1. ಮಾಜಿ ಸೈನಿಕ ಎಂದರೆ ಕೇಂದ್ರ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಲ್ಲದ) ಸೇವೆ ಸಲ್ಲಿಸಿದ ವ್ಯಕ್ತಿ ಎಂದು ಅರ್ಥ. ಆದರೆ ರಕ್ಷಣಾ ಭದ್ರತಾ ದಳ, ಸಾಮಾನ್ಯ ಮೀಸಲು ಇಂಜಿನಿಯರಿಂಗ್ ಪಡೆ, ಲೋಕ ಸಹಾಯಕ ಸೇನಾ ಮತ್ತು ಅರೆ ಮಿಲಿಟರಿ ಪಡೆಗಳಲ್ಲಿ ಸೇವೆ ಸಲ್ಲಿಸಿರುವ ವ್ಯಕ್ತಿಯನ್ನು; ಮತ್ತು

   ಎ). ನಿವೃತ್ತಿ ವೇತನವನ್ನು ಗಳಿಸಿದ ತರುವಾಯ ಅಂಥ ಸೇವೆಯಿಂದ ನಿವೃತ್ತನಾಗುವ ವ್ಯಕ್ತಿಯನ್ನು;

   ಅಥವಾ

   ಬಿ).ಸೈನಿಕ ಸೇವೆಯಿಂದ ಉಂಟಾದ ವೈದ್ಯಕೀಯ ಕಾರಣಗಳು ಅಥವಾ ಆತನ ನಿಯಂತ್ರಣ ಮೀರಿದ ಪರಿಸ್ಥಿತಿಗಳ ಮೇಲೆ ಅಂಥ ಸೇವೆಯಿಂದ ಬಿಡುಗಡೆ ಮಾಡಿರುವ ಮತ್ತು ವೈದ್ಯಕೀಯ ಅಥವಾ ಇತರ ಅಸಮರ್ಥತಾ ನಿವೃತ್ತಿ ವೇತನವನ್ನು ನೀಡಲಾಗಿರುವ ವ್ಯಕ್ತಿಯನ್ನು;

   ಅಥವಾ

   ಸಿ). ಆತನ ವೈಯಕ್ತಿಕ ಕೋರಿಕೆಯ ಮೇಲಲ್ಲದೆ ಸಿಬ್ಬಂದಿ ಸಂಖ್ಯೆಯ ಕಡಿತದ ಪ್ರತಿಫಲವಾಗಿ ಅಂಥ ಸೇವೆಯಿಂದ ಆತನನ್ನು ಬಿಡುಗಡೆಗೊಳಿಸಿರುವ ವ್ಯಕ್ತಿಯನ್ನು;

   ಅಥವಾ

   ಡಿ). ಆತನ ವೈಯಕ್ತಿಕ ಕೋರಿಕೆ ಮೇಲಲ್ಲದೇ ಅಥವಾ ದುರ್ವರ್ತನೆ ಅಥವಾ ಅದಕ್ಷತೆಯ ಕಾರಣದಿಂದ ವಜಾಗೊಳಿಸುವ ಅಥವಾ ತೆಗೆದುಹಾಕುವ ಮೂಲಕವಲ್ಲದೆ ಅನ್ಯಥಾ ನಿಯೋಜಿಸಲಾದ ನಿರ್ದಿಷ್ಟ ಅವಧಿ ಮುಕ್ತಾಯವಾದ ತರುವಾಯ ಅಂಥ ಸೇವೆಯಿಂದ ಬಿಡುಗಡೆಗೊಳಿಸಿರುವ ಮತ್ತು ಉಪದಾನ ನೀಡಿರುವ ವ್ಯಕ್ತಿಯನ್ನು - ಒಳಗೊಳ್ಳುವುದಿಲ್ಲ

   ಮತ್ತು ಪ್ರಾದೇಶಿಕ ಸೇವೆಯ ಮುಂದಿನ ಪ್ರವರ್ಗಗಳ ಸಿಬ್ಬಂದಿಯನ್ನು ಎಂದರೆ,

   i. ನಿರಂತರ ಸಂಚಿತ ಸೇವೆಗೆ ಸಂಬಂಧಿಸಿದ ನಿವೃತ್ತಿ ವೇತನದಾರರನ್ನು;
   ii. ಸೈನಿಕ ಸೇವೆಯ ಕಾರಣಗಳಿಂದ ಅಂಗವಿಕಲರಾದ ವ್ಯಕ್ತಿಗಳನ್ನು ಮತ್ತು
   iii. ಶೌರ್ಯ ಪ್ರಶಸ್ತಿ ವಿಜೇತರನ್ನು - ಒಳಗೊಳ್ಳುತ್ತದೆ.

2. ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಮರಣ ಹೊಂದಿದ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

ವಿವರಣೆ: ಕೇಂದ್ರ ಸಶಸ್ತ್ರ ಪಡೆಗಳಲ್ಲಿ ಸೇವೆ ಸಲ್ಲಿಸುತ್ತಿರುವ, ಸೇವೆಯಿಂದ ನಿವೃತ್ತರಾದ ತರುವಾಯ ಮಾಜಿ ಸೈನಿಕ ಪ್ರವರ್ಗದಡಿ ಬರುವ ವ್ಯಕ್ತಿಗಳು ನಿರ್ದಿಷ್ಟಪಡಿಸಲಾದ ನಿಯೋಜನೆಯ ನಿಬಂಧನೆಗಳನ್ನು ಪೂರ್ಣಗೊಳಿಸುವುದಕ್ಕಿಂತ ಒಂದು ವರ್ಷ ಮೊದಲು ಮರು ಉದ್ಯೋಗಕ್ಕಾಗಿ ಅರ್ಜಿ ಸಲ್ಲಿಸಲು ಮತ್ತು ಅವರು ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ರಿಯಾಯಿತಿಗಳನ್ನು ಪಡೆದುಕೊಳ್ಳಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ಧರಿಸುವುದನ್ನು ಬಿಡಲು ಅನುಮತಿ ನೀಡುವವರೆಗೆ ರಾಜ್ಯ ಸಿವಿಲ್ ಸೇವೆ ಅಥವಾ ಹುದ್ದೆಗೆ ನೇಮಕ ಹೊಂದುವಂತಿಲ್ಲ. ಇಂತಹವರು ಅರ್ಜಿ ಸಲ್ಲಿಸುವ ಮುನ್ನ ಸೇನೆಯಿಂದ ನಿರಾಕ್ಷೇಪಣಾ ಪತ್ರ ಪಡೆದುಕೊಂಡಿರತಕ್ಕದ್ದು ಅಥವಾ ಸೇನೆಯಿಂದ

ಬಿಡುಗಡೆಯಾದ ವ್ಯಕ್ತಿಗಳು ಅವರ ಬಿಡುಗಡೆ ಪ್ರಮಾಣ ಪತ್ರವನ್ನು ಪಡೆದುಕೊಂಡಿರತಕ್ಕದ್ದು ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ನೇಮಕಾತಿ ಪ್ರಾಧಿಕಾರಕ್ಕೆ ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಮೀಸಲಾತಿಯು ರದ್ದಾಗುವುದು.

ಮಾಜಿ ಸೈನಿಕರ ಅವಲಂಬಿತರು ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಮರಣ ಹೊಂದಿದ / ಶಾಶ್ವತವಾಗಿ ಅಂಗವಿಕಲರಾದ ಬಗ್ಗೆ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸುವ ಮುನ್ನ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ನೇಮಕಾತಿ ಪ್ರಾಧಿಕಾರಕ್ಕೆ ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಮೀಸಲಾತಿಯು ರದ್ದಾಗುವುದು. (ಈ ಪ್ರಮಾಣ ಪತ್ರದ ನಮೂನೆಯನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗಿದೆ).

17. ಗ್ರಾಮೀಣ ಅಭ್ಯರ್ಥಿ:

ಸರ್ಕಾರಿ ಅಧಿಸೂಚನೆ ಸಂಖ್ಯೆ: 59 ಶಾಸನ 2000, ದಿನಾಂಕ 06-01-2001 ಹಾಗೂ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 08 ಸೆನೆನಿ 2001, ದಿನಾಂಕ: 13.02.2001 ರನ್ವಯ ಗ್ರಾಮೀಣ ಮೀಸಲಾತಿಯಡಿ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾದಲ್ಲಿ ಮಾತ್ರ ಈ ಮೀಸಲಾತಿಯನ್ನು ಪಡೆಯಲು ಅರ್ಹರು.

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 08 ಸೆನೆನಿ 2001 ದಿನಾಂಕ 13-02-2001 ರನ್ವಯ ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ **ಸಾಮಾನ್ಯ ಅರ್ಹತೆಗೆ ಸೇರಿದ ಆದರೆ ಮೇಲುಸ್ತರದ ಪರಿಕಲ್ಪನೆಯ ವ್ಯಾಪ್ತಿಯಲ್ಲಿ ಬಾರದ ಗ್ರಾಮೀಣ ಅಭ್ಯರ್ಥಿಗಳು** ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1 (**RD ಸಂಖ್ಯೆಯನ್ನು ಹೊಂದಿರಬೇಕು**) ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದು ಆನ್‌ಲೈನ್ ಅರ್ಜಿಯಲ್ಲಿ RD ಸಂಖ್ಯೆಯನ್ನು ನಮೂದಿಸತಕ್ಕದ್ದು ಹಾಗೂ ಈ ಪ್ರಮಾಣ ಪತ್ರವಲ್ಲದೇ ನಮೂನೆ-2 ನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿಯು ರದ್ದಾಗುವುದು.

ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2 ರಲ್ಲಿ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿಯು ರದ್ದಾಗುವುದು.

ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದುಕೊಂಡಿರುವ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ನೇಮಕಾತಿ ಪ್ರಾಧಿಕಾರಕ್ಕೆ ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿಯು ರದ್ದಾಗುವುದು. (ಈ ಪ್ರಮಾಣಪತ್ರಗಳ ನಮೂನೆಯನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗಿದೆ).

18. ನಮೂನೆ-ಹೆಚ್:

ಆಯಾಯ ಇಲಾಖೆಯಲ್ಲಿನ ಉನ್ನತ ಹುದ್ದೆಗಳಿಗೆ ನೇರ ನೇಮಕಾತಿ ಮಾಡುವ ಸಂದರ್ಭದಲ್ಲಿ , ಆಯಾಯ ಇಲಾಖೆಯ ಕೆಳಹಂತದ ಹುದ್ದೆಗಳಲ್ಲಿ ಕನಿಷ್ಠ ಸೇವಾನುಭವವನ್ನು ನಿಗದಿಪಡಿಸಿದಲ್ಲಿ, ಅಂತಹ ಸೇವಾನಿರತ ಹಿಂದುಳಿದ ವರ್ಗಗಳ ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ಗೆ ಸೇರಿದ ಅಭ್ಯರ್ಥಿಗಳು, ಸರ್ಕಾರಿ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000, ದಿನಾಂಕ: 30.03.2022 ರ ಅನುಬಂಧ-II ಹೊಸ ಕೆನೆಪದರ ರಂತೆ ಕೆನೆಪದರ ಮಿತಿಗೆ ವಿನಾಯಿತಿ ಪ್ರಮಾಣ ಪತ್ರವನ್ನು ನಮೂನೆ-ಹೆಚ್ ರಲ್ಲಿ ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ

ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ನೇಮಕಾತಿ ಪ್ರಾಧಿಕಾರಕ್ಕೆ ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಸೇವಾನಿರತ ಸಿಬ್ಬಂದಿಗಳಿಗೆ ಮೀಸಲಿರಿಸಿದ ಹುದ್ದೆಯ ಮೀಸಲಾತಿಯು ರದ್ದಾಗುವುದು.

19. ಕನ್ನಡ ಮಾಧ್ಯಮ ಅಭ್ಯರ್ಥಿ:

ಸರ್ಕಾರಿ ಅಧಿಸೂಚನೆ ಸಂಖ್ಯೆ: ಸಿಆಸುಇ 71 ಸೆನೆನಿ 2001 ದಿನಾಂಕ 24-10-2002 ರನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ನೇಮಕಾತಿ ಪ್ರಾಧಿಕಾರಕ್ಕೆ ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಕನ್ನಡ ಮಾಧ್ಯಮ ಅಭ್ಯರ್ಥಿ ಮೀಸಲಾತಿಯು ರದ್ದಾಗುವುದು. (ಈ ಪ್ರಮಾಣ ಪತ್ರದ ನಮೂನೆಯನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗಿದೆ).

20. ಯೋಜನೆಗಳಿಂದ ನಿರ್ವಸಿತರಾದ ಅಭ್ಯರ್ಥಿಗಳು;

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 23 ಸೆನೆನಿ 99, ದಿನಾಂಕ 23.11.2000 ಮತ್ತು ತಿದ್ದುಪಡಿ ಆದೇಶ ಸಂಖ್ಯೆ ಸಿಆಸುಇ 252 ಸೆನೆನಿ 2020 (ಭಾಗ-1), ದಿನಾಂಕ 07.07.2021 ರನ್ವಯ ಯೋಜನೆಗಳಿಂದ ನಿರ್ವಸಿತರಾದ (ಆದರೆ ಈ ನಿಯಮಗಳು ಜಾರಿಯಾಗುವ 25 ವರ್ಷಕ್ಕೆ ಮುನ್ನ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಾತಿ ಅನ್ವಯವಾಗುವುದಿಲ್ಲ) ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ನೇಮಕಾತಿ ಪ್ರಾಧಿಕಾರಕ್ಕೆ ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಯೋಜನೆಗಳಿಂದ ನಿರ್ವಸಿತರಾದ ಅಭ್ಯರ್ಥಿಯ ಮೀಸಲಾತಿಯು ರದ್ದಾಗುವುದು.

21. ವಿಶೇಷ ಚೇತನ ಅಭ್ಯರ್ಥಿಗಳಿಗೆ:

ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ/149/ಎಸ್ಆರ್ಆರ್/2020, ದಿನಾಂಕ: 25.09.2020 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಗ್ರೂಪ್-ಸಿ ಹುದ್ದೆಗಳಿಗೆ ಶೇ. 5 ರಷ್ಟು ಸಮತಳ ಮೀಸಲಾತಿಯನ್ನು ಕಲ್ಪಿಸಲಾಗಿರುತ್ತದೆ. ಆಯಾ ಇಲಾಖೆ / ಸಂಸ್ಥೆಗಳಲ್ಲಿ ವಿಶೇಷ ಚೇತನ ಅಭ್ಯರ್ಥಿಗಳಿಗೆ ಗುರುತಿಸಿರುವ / ಅನ್ವಯಿಸುವ ಹುದ್ದೆಗಳಿಗೆ ಸಂಬಂಧಿಸಿದಂತೆ ಶೇ. 40 ಕ್ಕಿಂತ ಕಡಿಮೆ ಇಲ್ಲದಂತಹ ನ್ಯೂನತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ/115/ಸೆನೆನಿ/2005 ದಿನಾಂಕ 19-11-2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಮಮಇ 65 ಪಿಹೆಚ್‌ಪಿ 2010 ದಿನಾಂಕ 18-02-2011 ರಂತೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಯ ವೈದ್ಯಕೀಯ ಪ್ರಾಧಿಕಾರ / ತಾಲ್ಲೂಕು ಮಟ್ಟದ ವೈದ್ಯಕೀಯ ಪ್ರಾಧಿಕಾರ / ಜಿಲ್ಲಾಮಟ್ಟದ ವೈದ್ಯಕೀಯ ಪ್ರಾಧಿಕಾರ/ ಬೆಂಗಳೂರು ವೈದ್ಯಕೀಯ ಪ್ರಾಧಿಕಾರ ಇವರಿಂದ ಪ್ರಮಾಣ ಪತ್ರ/ UDID ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು ಹಾಗೂ ನೇಮಕಾತಿ ಪ್ರಾಧಿಕಾರಗಳು ನಡೆಸುವ ವೈದ್ಯಕೀಯ ಮಂಡಳಿ ಪರಿಶೀಲನೆಗೆ ಹಾಜರಾಗಿ ನಿಯಮಾನುಸಾರ ಅರ್ಹತೆಗಳಿಸಬೇಕು. ನೇಮಕಾತಿ ಪ್ರಾಧಿಕಾರಗಳು ರಚಿಸುವ, ವೈದ್ಯಕೀಯ ಮಂಡಳಿ ನಡೆಸುವ ವೈದ್ಯಕೀಯ ಪರಿಶೀಲನೆಯಲ್ಲಿ ನಿಯಮಾನುಸಾರ ಅಂಗವಿಕಲತೆ ಸಾಬೀತಾಗುವುದು ಕಡ್ಡಾಯವಾಗಿರುತ್ತದೆ. ಅರ್ಜಿ ಸಲ್ಲಿಸುವಾಗ ಪಡೆದ ಪ್ರಮಾಣ ಪತ್ರಗಳನ್ನೇ ಆಧರಿಸಿ ನೇಮಕಾತಿ ಆದೇಶ ನೀಡಲಾಗುವುದಿಲ್ಲ. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ವಿಶೇಷ ಚೇತನ ಮೀಸಲಾತಿಯು ರದ್ದಾಗುವುದು.

22. ತೃತೀಯ ಲಿಂಗದ ಅಭ್ಯರ್ಥಿಗಳಿಗೆ:

ಸರ್ಕಾರದ ಅಧಿಸೂಚನೆ ಸಂಖ್ಯೆ ಸಿಆಸುಇ 179 ಸೇನೆನಿ 2020 ದಿನಾಂಕ: 06-07-2021 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಸಮೂಹ-'ಎ', 'ಬಿ', 'ಸಿ' ಮತ್ತು 'ಡಿ 'ಗುಂಪಿನ ಹುದ್ದೆಗಳಿಗೆ ಸಾಮಾನ್ಯ ವರ್ಗ, ಪರಿಶಿಷ್ಟ ಜಾತಿಗಳು, ಪರಿಶಿಷ್ಟ ಪಂಗಡಗಳು ಮತ್ತು ಇತರೆ ಹಿಂದುಳಿದ ವರ್ಗಗಳ ಪ್ರತಿಯೊಂದು ಪ್ರವರ್ಗದಿಂದ ಶೇಕಡಾ 1 (ಒಂದರಷ್ಟು) ರಷ್ಟು ಹುದ್ದೆಗಳನ್ನು ತೃತೀಯ ಲಿಂಗದ ಅಭ್ಯರ್ಥಿಗಳಿಗೆ ಮೀಸಲಾತಿ ಕಲ್ಪಿಸಿದ್ದು, ತೃತೀಯ ಲಿಂಗದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಕೇಂದ್ರ ಅಧಿನಿಯಮ ತೃತೀಯ ಲಿಂಗ ವ್ಯಕ್ತಿಗಳ (ಹಕ್ಕುಗಳ ರಕ್ಷಣೆ) 2019 ರಲ್ಲಿ ನಿಗದಿಪಡಿಸಿರುವಂತೆ ಜಿಲ್ಲಾ ಮ್ಯಾಜಿಸ್ಟ್ರೇಟ್‌ರವರಿಂದ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ನೇಮಕಾತಿ ಪ್ರಾಧಿಕಾರಕ್ಕೆ ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯು ರದ್ದಾಗುವುದು.

23. ಕ್ರೀಡಾ-ಸಾಧಕ ಅಭ್ಯರ್ಥಿಗಳಿಗೆ:

ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 295 ಸೇನೆನಿ 2023 ದಿನಾಂಕ: 03-10-2026 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಹುದ್ದೆಗಳಿಗೆ ಸಾಮಾನ್ಯ ವರ್ಗ, ಪರಿಶಿಷ್ಟ ಜಾತಿಗಳು, ಪರಿಶಿಷ್ಟ ಪಂಗಡಗಳು ಮತ್ತು ಇತರೆ ಹಿಂದುಳಿದ ವರ್ಗಗಳ ಪ್ರತಿಯೊಂದು ಪ್ರವರ್ಗದಿಂದ ಶೇಕಡಾ 2 (ಎರಡರಷ್ಟು) ರಷ್ಟು ಹುದ್ದೆಗಳನ್ನು ಕ್ರೀಡಾ-ಸಾಧಕ ಅಭ್ಯರ್ಥಿಗಳಿಗೆ ಮೀಸಲಾತಿ ಕಲ್ಪಿಸಲಾಗಿರುತ್ತದೆ.

ವಿವರಣೆ:- ಕ್ರೀಡಾ-ಸಾಧಕ ಎಂದರೆ, ಕನಿಷ್ಟ ಹತ್ತು ವರ್ಷಗಳ ಕಾಲ ಕರ್ನಾಟಕ ರಾಜ್ಯದಲ್ಲಿ ವಾಸವಾಗಿರುವ ಮತ್ತು ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 295 ಸೇನೆನಿ 2023 ದಿನಾಂಕ: 03-10-2026 ರಲ್ಲಿ ನಿರ್ದಿಷ್ಟಪಡಿಸಿದ ಕ್ರೀಡೆಗಳು ಅಥವಾ ಆಟಗಳಲ್ಲಿ ರಾಷ್ಟ್ರೀಯ ಅಥವಾ ಅಂತರಾಷ್ಟ್ರೀಯ ಸ್ಪರ್ಧೆಗಳಲ್ಲಿ ವೈಯಕ್ತಿಕವಾಗಿ ಅಥವಾ ತಂಡದ ಸದಸ್ಯರಾಗಿ ಭಾಗವಹಿಸಿ, ಕರ್ನಾಟಕವನ್ನು ಪ್ರತಿನಿಧಿಸಿದ ಕ್ರೀಡಾಪಟುಗಳು ಅಥವಾ ಇತರೆ ರಾಜ್ಯ ಅಥವಾ ಭಾರತೀಯ ರೈಲ್ವೆಯಂತಹ ಸಂಸ್ಥೆಗಳನ್ನು ಪ್ರತಿನಿಧಿಸಿದ್ದಲ್ಲಿ, ಕನಿಷ್ಟ ಒಂದು ಭಾರತ ಸರ್ಕಾರದ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯದಿಂದ ಮಾನ್ಯತೆ ಪಡೆದ(recognized) ರಾಷ್ಟ್ರೀಯ ಚಾಂಪಿಯನ್‌ಶಿಪ್ (National Championship) ಅಥವಾ ಕನಿಷ್ಟ ಒಂದು ರಾಷ್ಟ್ರೀಯ ಕ್ರೀಡಾಕೂಟ (National Games) ದಲ್ಲಿ ಕರ್ನಾಟಕ ರಾಜ್ಯವನ್ನು ಕಡ್ಡಾಯವಾಗಿ ಪ್ರತಿನಿಧಿಸಿದ ಕ್ರೀಡಾಪಟುಗಳು ಮಾತ್ರ.

ಸದರಿ ಅಧಿಸೂಚನೆಯಲ್ಲಿ ತಿಳಿಸಿರುವಂತೆ, ಕ್ರೀಡಾ ಸಾಧಕರಿಗೆ ಅವರ ಸಾಧನೆಗೆ ಅನುಗುಣವಾಗಿ ಸಂಬಂಧಿತ ಸ್ಪರ್ಧೆಗೆ, ಸಂಬಂಧಿತ ಪ್ರಾಧಿಕಾರದಿಂದ ಪ್ರಮಾಣೀಕರಿಸಲ್ಪಟ್ಟಿದ್ದಲ್ಲಿ, ನಿರ್ದಿಷ್ಟ ಪಡಿಸಿರುವಂತೆ ಕೃಪಾಂಕಗಳನ್ನು (Weightage Marks) ನೀಡಲಾಗುವುದು. ಕ್ರೀಡಾ ಸಾಧಕರು ಅವರ ಸಾಧನೆಗೆ ಅನುಗುಣವಾಗಿ ಸಂಬಂಧಿತ ಸ್ಪರ್ಧೆಗೆ, ಸಂಬಂಧಿತ ಪ್ರಾಧಿಕಾರದಿಂದ ಪ್ರಮಾಣೀಕರಿಸಿದ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ನೇಮಕಾತಿ ಪ್ರಾಧಿಕಾರಕ್ಕೆ ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯು ರದ್ದಾಗುವುದು.

ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 295 ಸೇನೆನಿ 2023 ದಿನಾಂಕ: 03-10-2026 ರಲ್ಲಿ ತಿಳಿಸಿರುವಂತೆ, ಕ್ರೀಡಾ ಸಾಧಕರಿಗೆ ಮೀಸಲಿರಿಸಿದ ಹುದ್ದೆಗಳನ್ನು ಪರಿಗಣಿಸಲಾಗುವುದು (ದಿನಾಂಕ: 03-10-2026 ರ ಅಧಿಸೂಚನೆಯನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗಿದೆ).

24. ಅನುಚ್ಛೇದ 371(ಜೆ) ರಂತೆ ಕಲ್ಯಾಣ-ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮೀಸಲಾತಿ:

ಕರ್ನಾಟಕ ಸಾರ್ವಜನಿಕ ಉದ್ಯೋಗ (ಕಲ್ಯಾಣ-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು 2013 ಕ್ಕೆ ಸಂಬಂಧಿಸಿದಂತೆ ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು

ಕೋರುವ ಅಭ್ಯರ್ಥಿಗಳು ಅನುಬಂಧ-ಎ ಯಲ್ಲಿರುವ ನಮೂನೆಯಲ್ಲಿಯೇ (RD ಸಂಖ್ಯೆ ಇರುವ) ಅರ್ಹತಾ ಪ್ರಮಾಣಪತ್ರವನ್ನು ಸಕ್ಷಮ ಪ್ರಾಧಿಕಾರವಾದ ಸಂಬಂಧಪಟ್ಟ ಉಪ ವಿಭಾಗದ ಸಹಾಯಕ ಆಯುಕ್ತರಿಂದ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ನೇಮಕಾತಿ ಪ್ರಾಧಿಕಾರಕ್ಕೆ ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯು ರದ್ದಾಗುವುದು.

ಸರ್ಕಾರಿ ಸೇವೆಯಲ್ಲಿರುವ ನೌಕರರು ದಿನಾಂಕ: 29.01.2014 ರಂದು ಹೊರಡಿಸಲಾದ ಅಧಿಸೂಚನೆ-1 ಸಂಖ್ಯೆ: ಡಿಪಿಎಆರ್ 43 ಹೆಚ್‌ಕೆಸಿ 2013 ರಲ್ಲಿನ ಅನುಬಂಧ-ಎ ನಲ್ಲಿ ಇರುವಂತೆ ದಿನಾಂಕ: 01.01.2013 ಕ್ಕಿಂತ ಮುಂಚೆ ತಮ್ಮ ಸೇವಾ ಪುಸ್ತಕದಲ್ಲಿ ಹೈದ್ರಾಬಾದ್-ಕರ್ನಾಟಕ (ಕಲ್ಯಾಣ ಕರ್ನಾಟಕ) ಪ್ರದೇಶದ ಸ್ಥಳ ನಮೂದಾಗಿದ್ದಲ್ಲಿ, ಸ್ವಗ್ರಾಮ ಪ್ರಮಾಣ ಪತ್ರವನ್ನು ಕಛೇರಿ ಮುಖ್ಯಸ್ಥರಿಂದ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ನೇಮಕಾತಿ ಪ್ರಾಧಿಕಾರಕ್ಕೆ ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯು ರದ್ದಾಗುವುದು.

ಈ ಪ್ರಮಾಣ ಪತ್ರಗಳ ನಮೂನೆಯನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗಿದೆ. ಈ ನಮೂನೆಯನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಅರ್ಹತಾ ಪ್ರಮಾಣ ಪತ್ರವನ್ನು ಪಡೆದು ಅನರ್ಹರಾದರೇ ಪ್ರಾಧಿಕಾರ / ನೇಮಕಾತಿ ಪ್ರಾಧಿಕಾರ ಜವಾಬ್ದಾರಿಯಾಗುವುದಿಲ್ಲ.

25. ಪ್ರಾಧಿಕಾರದೊಡನೆ ಪತ್ರ ವ್ಯವಹಾರ;

ಪ್ರಾಧಿಕಾರವು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ಆದುದರಿಂದ, ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವಾಗ ಜಾಗರೂಕತೆಯಿಂದ ಭರ್ತಿ ಮಾಡತಕ್ಕದ್ದು. ಅಭ್ಯರ್ಥಿಗಳು ಪ್ರಾಧಿಕಾರದೊಡನೆ ಸಂಪರ್ಕಿಸಲೇಬೇಕಾದ ಸಂದರ್ಭದಲ್ಲಿ ತಮ್ಮ ಮನವಿಯು ಈ ಕೆಳಕಂಡ ಮಾಹಿತಿಗಳನ್ನು ಒಳಗೊಂಡಿರಬೇಕು.

(i) ಅರ್ಜಿ ಸಂಖ್ಯೆ ಮತ್ತು ಹುದ್ದೆಯ / ವಿಷಯದ ಹೆಸರು
(ii) ಅಭ್ಯರ್ಥಿಯ ಪೂರ್ಣ ಹೆಸರು (ಬಿಡಿ ಅಕ್ಷರಗಳಲ್ಲಿ)
(iii) ಅರ್ಜಿಯಲ್ಲಿ ನಮೂದಿಸಿರುವ ಅಂಚೆ ವಿಳಾಸ

- ಪ್ರಾಧಿಕಾರದ ಅಧಿಕೃತ 'X' ಖಾತೆ @KEA_KARNATAKA ದಲ್ಲಿ ವೆಬ್‌ಸೈಟ್‌ನಲ್ಲಿ ಲಭ್ಯವಿರುವ ನೇಮಕಾತಿ ಸಂಬಂಧದ ಎಲ್ಲಾ ಮಾಹಿತಿಗಳನ್ನು ಪಡೆಯಬಹುದಾಗಿರುತ್ತದೆ.

26. ಪ್ರಮುಖವಾದ ಸೂಚನೆಗಳು:

ಅಭ್ಯರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು (Recent photograph in JPEG format with white background, with a file size between 50KB to 200KB) ಹಾಗೂ ಬಿಳಿಯ ಹಾಳೆಯ ಮೇಲೆ ಕಪ್ಪು ಶಾಹಿಯ ಸ್ಕೆಚ್/ಮಾರ್ಕರ್ ಪೆನ್ನಿನಲ್ಲಿ ಸಹಿಯನ್ನು ಮಾಡಿ (Signature in JPEG format, with a file size between 50KB to 70KB) ಅಳತೆಯಲ್ಲಿ ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು. ಭಾವಚಿತ್ರ ಹಾಗೂ ಸಹಿಯನ್ನು ಅಪ್‌ಲೋಡ್ ಮಾಡದ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ.

ಈ ಕೆಳಕಂಡ ಪ್ರಮಾಣ ಪತ್ರಗಳನ್ನು ನಿಗದಿತ ನಮೂನೆಯಲ್ಲಿ ಆನ್‌ಲೈನ್ ಮೂಲಕ ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರಗಳಿಂದ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಮೂಲ ದಾಖಲಾತಿಯ ಪರಿಶೀಲನೆಗೆ ಅರ್ಹರಾದಾಗ ಆ ಸಮಯದಲ್ಲಿ ಅದೇ ಮೀಸಲಾತಿ(ಲಂಬ) ಪ್ರಮಾಣ ಪತ್ರದ ಹಾಗೂ ಇತರೇ ಪ್ರಮಾಣ ಪತ್ರಗಳ(ಸಮತಳ) ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು. ಕೊನೆಯ ದಿನಾಂಕದ ನಂತರ ಪಡೆದ ಯಾವುದೇ ಪ್ರಮಾಣ ಪತ್ರಗಳನ್ನು ಪರಿಗಣಿಸುವುದಿಲ್ಲ. ಹಾಗೆಯೇ ಯಾವುದೇ ಮೀಸಲಾತಿ ಪ್ರಮಾಣ ಪತ್ರಗಳು ನಿಗದಿಪಡಿಸಿರುವ ನಮೂನೆಗಳಲ್ಲಿರದಿದ್ದಲ್ಲಿ ಮತ್ತು ತಪ್ಪಿದ್ದಲ್ಲಿ ಸದರಿ ಮೀಸಲಾತಿಯು ತಿರಸ್ಕೃತಗೊಳ್ಳುವುದು / ಅಭ್ಯರ್ಥಿತನ ಅನರ್ಹಗೊಳ್ಳುವುದು.

ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಪಡೆದಿಟ್ಟುಕೊಳ್ಳಬೇಕಾದ ಪ್ರಮಾಣಪತ್ರಗಳು.

1. ಆಧಾರ್‌ಕಾರ್ಡ್
2. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದ ಆಯಾ ಹುದ್ದೆಗಳಿಗೆ ನಿಗದಿಪಡಿಸಲಾದ / ವಿದ್ಯಾರ್ಹತೆಯ ಎಲ್ಲಾ ವಿಷಯಗಳ / ಸೆಮಿಸ್ಟರ್‌ಗಳ ಅಂಕಪಟ್ಟಿಗಳು ಹಾಗೂ ಘಟಿಕೋತ್ಸವದ ಪ್ರಮಾಣ ಪತ್ರ /ಪಿಡಿಸಿ.
3. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ / ಶಾಲೆಯ ವರ್ಗಾವಣೆ ಪ್ರಮಾಣ ಪತ್ರ / ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ.
4. ಸೈನಿಕ ಸೇವೆಯಿಂದ ಬಿಡುಗಡೆಯಾದ ಪ್ರಮಾಣ ಪತ್ರ ಮತ್ತು ಪಿಂಚಣಿ / ಗ್ರಾಚ್ಯುಟಿ ಪಡೆಯುತ್ತಿರುವ ಪ್ರಮಾಣ ಪತ್ರ / ಮಾಜಿ ಸೈನಿಕ ಅವಲಂಬಿತರಾಗಿದ್ದಲ್ಲಿ, ಮಾಜಿ ಸೈನಿಕರು ಸೇವೆಯಲ್ಲಿರುವಾಗ ಮೃತಪಟ್ಟಿದ್ದಲ್ಲಿ ಅಥವಾ ಶಾಶ್ವತವಾಗಿ ಅಂಗವಿಕಲರಾದ (Permanently Disabled) ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)
5. ಪರಿಶಿಷ್ಟ ಜಾತಿ (ಪ್ರವರ್ಗ-ಎ, ಪ್ರವರ್ಗ-ಬಿ ಮತ್ತು ಪ್ರವರ್ಗ-ಸಿ), ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ಮೀಸಲಾತಿ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಗದಿತ ನಮೂನೆಗಳಲ್ಲಿ (ಮೀಸಲಾತಿ ಕೋರಿದ್ದಲ್ಲಿ)
6. ಗ್ರಾಮೀಣ ಮೀಸಲಾತಿ ಕೋರಿದ ಸಾಮಾನ್ಯ ಅರ್ಹತೆ ಅಭ್ಯರ್ಥಿಗಳು - ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2ರಲ್ಲಿ ಹಾಗೂ ಗ್ರಾಮೀಣ ಮೀಸಲಾತಿ ಕೋರಿದ ಪರಿಶಿಷ್ಟ ಜಾತಿ(ಪ್ರವರ್ಗ-ಎ, ಪ್ರವರ್ಗ-ಬಿ ಮತ್ತು ಪ್ರವರ್ಗ-ಸಿ) / ಪರಿಶಿಷ್ಟ ಪಂಗಡ/ ಪ್ರವರ್ಗ-1/ ಪ್ರವರ್ಗ-2ಎ/ ಪ್ರವರ್ಗ-2ಬಿ/ ಪ್ರವರ್ಗ-3ಎ/ ಪ್ರವರ್ಗ-3ಬಿ ಅಭ್ಯರ್ಥಿಗಳು ನಮೂನೆ-2 ರಲ್ಲಿ ಮಾತ್ರ)
7. ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
8. ಜಿಲ್ಲಾ ಮ್ಯಾಜಿಸ್ಟ್ರೇಟ್‌ರವರಿಂದ ಪಡೆದ ತೃತೀಯ ಲಿಂಗದ ಪ್ರಮಾಣ ಪತ್ರ(ಮೀಸಲಾತಿ ಕೋರಿದ್ದಲ್ಲಿ)
9. ಕ್ರೀಡಾ-ಸಾಧಕ ಮೀಸಲಾತಿ ಕೋರಿದ ಅಭ್ಯರ್ಥಿಗಳು ಸಂಬಂಧಿತ ಸ್ಪರ್ಧೆಗೆ ಸಂಬಂಧಿತ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ(ಮೀಸಲಾತಿ ಕೋರಿದ್ದಲ್ಲಿ)
10. ಭಾರತೀಯ ಸಂವಿಧಾನ ಅನುಚ್ಛೇದ 371(ಜೆ) ರಂತೆ ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ವ್ಯಕ್ತಿಯೆಂದು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರಗಳು
11. ಸೇವೆಯಲ್ಲಿರುವ ಅಭ್ಯರ್ಥಿಗಳು ಆಯ್ಕೆಯಾದಲ್ಲಿ ನಿರಾಕ್ಷೇಪಣ ಪ್ರಮಾಣ ಪತ್ರಗಳನ್ನು ಪಡೆದು ನೇಮಕಾತಿ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು.

27. ವಿಶೇಷ ಸೂಚನೆಗಳು:

I. **ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವಾಗ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಬಗ್ಗೆ ಖಚಿತಪಡಿಸಿಕೊಂಡು ನಂತರ ಅದರ ಒಂದು ಪ್ರತಿಯನ್ನು ಕಡ್ಡಾಯವಾಗಿ ಡೌನ್‌ಲೋಡ್ ಮಾಡಿಕೊಳ್ಳಬೇಕು ಮತ್ತು ಶುಲ್ಕ ಪಾವತಿಯ ಚಲನ್ ಅನ್ನು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ಕಾಯ್ದಿಟ್ಟುಕೊಳ್ಳತಕ್ಕದ್ದು. ನಂತರ ಯಾವುದೇ ಹಂತದಲ್ಲಿ ಪ್ರಾಧಿಕಾರಕ್ಕೆ ಮನವಿಯನ್ನು ಸಲ್ಲಿಸಿದ್ದಲ್ಲಿ ಅರ್ಜಿ ಪ್ರತಿಯನ್ನು ನೀಡಲಾಗುವುದಿಲ್ಲ.**

II. **<u>ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಮೀಸಲಾತಿಯನ್ನು ಕೋರದೇ ತದನಂತರದಲ್ಲಿ ಹೊಸದಾಗಿ ಮೀಸಲಾತಿಯನ್ನು ಪರಿಗಣಿಸುವಂತೆ ಕೋರುವ ಮನವಿಗಳನ್ನು ಪರಿಗಣಿಸುವುದಿಲ್ಲ.</u>**

III. ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಸಲ್ಲಿಸಲಾಗುವ ಅರ್ಜಿಯಲ್ಲಿ ಯಾವುದೇ ಹಂತದಲ್ಲಿ ಅಥವಾ ಯಾವುದೇ ರೀತಿಯ ತಿದ್ದುಪಡಿಗಳನ್ನು ಮಾಡುವಂತೆ ಕೋರಿದ್ದಲ್ಲಿ, ಸದರಿ ಮನವಿಯನ್ನು ಪುರಸ್ಕರಿಸಲಾಗುವುದಿಲ್ಲ.

IV. ಈಗಾಗಲೇ ಸೇವೆಯಲ್ಲಿರುವ / ಸೇವೆ ಸಲ್ಲಿಸಿದ ಅಭ್ಯರ್ಥಿಗಳು ಆಯ್ಕೆಯಾದ ಪಕ್ಷದಲ್ಲಿ ಅವರುಗಳ ನೇಮಕಾತಿ ಪ್ರಾಧಿಕಾರಗಳಿಂದ ನಿಗದಿತ ನಮೂನೆಯಲ್ಲಿ ನಿರಾಕ್ಷೇಪಣಾ ಪ್ರಮಾಣ ಪತ್ರ / ಅನುಮತಿಯನ್ನು / ಸೇವಾ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡು ನೇಮಕಾತಿ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು ಹಾಗೂ ಸೇವಾ ವಿವರಗಳನ್ನು ಅರ್ಜಿಯಲ್ಲಿ ನಮೂದಿಸಬೇಕು. ಸುಳ್ಳು ಮಾಹಿತಿಯನ್ನು ನಮೂದಿಸಿದ್ದಲ್ಲಿ ಅವರನ್ನು ಅನರ್ಹಗೊಳಿಸಲಾಗುವುದು.

V. ಅಭ್ಯರ್ಥಿಯು ಅರ್ಜಿಯಲ್ಲಿ ನೀಡುವ ಮೊಬೈಲ್ ಸಂಖ್ಯೆ/ಇ-ಮೇಲ್ ಅಂತಿಮವಾಗಿದ್ದು, ಎಲ್ಲಾ ಮಾಹಿತಿಗಳನ್ನು ಅದೇ ಮೊಬೈಲ್ ಸಂಖ್ಯೆ/ಇ-ಮೇಲ್‌ಗಳಿಗೆ ಕಳುಹಿಸಿಕೊಡಲಾಗುವುದು. ನಂತರದಲ್ಲಿ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.

VI. ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯ ಪರೀಕ್ಷೆಗೆ ಹಾಜರಾಗಿ, ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಫಲಿತಾಂಶ ಪ್ರಕಟವಾಗದ ಪಕ್ಷದಲ್ಲಿ ಅಂತಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಂತಿಲ್ಲ.

VII. ಅಭ್ಯರ್ಥಿಯು ಸಲ್ಲಿಸುವ ವಿದ್ಯಾರ್ಹತೆಯ ಪ್ರಮಾಣ ಪತ್ರ/ಇನ್ನಿತರೆ ಮೀಸಲಾತಿ ಪ್ರಮಾಣ ಪತ್ರಗಳಿಗೆ ಸಂಬಂಧಿಸಿದಂತೆ ಯಾವುದೇ ಗೊಂದಲಗಳು ಇದ್ದಲ್ಲಿ ಸಂಬಂಧಪಟ್ಟ ಪ್ರಾಧಿಕಾರಸ್ಥರು ಗೊಂದಲ ನಿವಾರಣೆ ಮಾಡುವವರೆಗೆ ಅವರ ಆಯ್ಕೆಯನ್ನು ಅಂತಿಮಗೊಳಿಸಲಾಗುವುದಿಲ್ಲ.

VIII. ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿಯನ್ನು ಭರ್ತಿ ಮಾಡುವ ಮೊದಲು ವೆಬ್‌ಸೈಟ್‌ನಲ್ಲಿ ನೀಡಿರುವ ವಿವರವಾದ ಪ್ರಕಟಣೆಯನ್ನು / ಸೂಚನೆಗಳನ್ನು/ ವಿಧಾನವನ್ನು ತಿಳಿದುಕೊಳ್ಳುವುದು ಹಾಗೂ ಅರ್ಜಿಯಲ್ಲಿ ಘೋಷಿಸಿರುವ ಮಾಹಿತಿಗಳು ಅಂತಿಮವಾಗಿದ್ದು, ಹೆಚ್ಚಿನ ಮಾಹಿತಿ / ದಾಖಲೆಗಳ ಸಲ್ಲಿಕೆಗೆ ಅವಕಾಶವಿರುವುದಿಲ್ಲ.

IX. ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ತುಂಬದೇ ಅರ್ಜಿಯು ತಿರಸ್ಕೃತವಾದಲ್ಲಿ ಅಥವಾ ಯಾವುದೇ ಸೌಲಭ್ಯದಿಂದ ಅವರು ವಂಚಿತರಾದಲ್ಲಿ ಅದಕ್ಕೆ ಅಭ್ಯರ್ಥಿಗಳೇ ನೇರ ಜವಾಬ್ದಾರರು.

X. ಆಯ್ಕೆಗೆ ಸಂಬಂಧಿಸಿದಂತೆ ಅಭ್ಯರ್ಥಿಯು ಯಾವುದೇ ವಿಧವಾದ ಅಪಪ್ರಚಾರ ಮಾಡುವ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಲ್ಲಿ ಯಾವುದೇ ಮುನ್ಸೂಚನೆ ನೀಡದೇ ಅವರನ್ನು ಆಯ್ಕೆಗೆ ಅನರ್ಹಗೊಳಿಸಲಾಗುವುದು.

XI. ಪರೀಕ್ಷೆ ಸಂಬಂಧ ಜಾರಿಯಲ್ಲಿರುವ ಕೇಂದ್ರ ಸರ್ಕಾರ / ರಾಜ್ಯ ಸರ್ಕಾರದ ಆದೇಶ / ಮಾರ್ಗಸೂಚಿಗಳನ್ವಯ ಯಾವುದೇ ಪರೀಕ್ಷಾ ಅಕ್ರಮ / ಚಟುವಟಿಕೆಗಳಲ್ಲಿ ಭಾಗವಹಿಸಿದ್ದು ಕಂಡುಬಂದಲ್ಲಿ ಯಾವುದೇ ಹಂತದಲ್ಲಿಯಾದರೂ ಅಂತಹ ಅಭ್ಯರ್ಥಿಗಳ ವಿರುದ್ಧ ಕಾನೂನುರಿತ್ಯ ಕ್ರಮ ಜರುಗಿಸಲಾಗುವುದು.

28. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು:

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು: ಮಾಹಿತಿ ಕೇಂದ್ರ - 080-23460460. (10.00 AM to 6.00 PM)

29. ದುರ್ನಡತೆ:

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವರೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವರೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವರೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವರೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವರೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವರೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವರೆಂದು, ಕಂಡುಬಂದಲ್ಲಿ ಅವರು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

ಗಮನಿಸಿ:

1. ಕೇವಲ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ್ದಲ್ಲಿ, ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾದಲ್ಲಿ ಮತ್ತು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅರ್ಹತೆ ಪಡೆದ ಮಾತ್ರಕ್ಕೆ ಅಭ್ಯರ್ಥಿಗಳಿಗೆ ಈ ಮೇಲಿನ ವಿವಿಧ ಹುದ್ದೆಗಳ ನೇಮಕಾತಿಯಲ್ಲಿ ಯಾವುದೇ ಹಕ್ಕನ್ನು ನೀಡುವುದಿಲ್ಲ, ನೇಮಕಾತಿಯು ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸುವ ಅರ್ಹತಾ ಮಾನದಂಡಗಳಿಗೆ ಒಳಪಟ್ಟಿರುತ್ತದೆ.

ಮೇಲಿನ ಯಾವುದೇ ನಿಯಮಗಳು / ಕಾರ್ಯವಿಧಾನಗಳಿಗೆ ಸಂಬಂಧಿಸಿದಂತೆ ವ್ಯತ್ಯಾಸ ಅಥವಾ ಅಸ್ಪಷ್ಟತೆ ಕಂಡು ಬಂದಲ್ಲಿ, ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ಹಾಗೂ ಕಾಲಕಾಲಕ್ಕೆ ಆಗಿರುವ ಅದರ ತಿದ್ದುಪಡಿ ನಿಯಮಗಳು, ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 149 ಎಸ್‌ಆರ್‌ಆರ್ 2020, ದಿನಾಂಕ: 25.09.2020 ಹಾಗೂ ಈ ಸಂಬಂಧ ಸಂಬಂಧಪಟ್ಟ ಇಲಾಖೆಗಳಿಗೆ ಅನ್ವಯಿಸುವ ಆದೇಶಗಳು,

ಕರ್ನಾಟಕ ನಾಗರಿಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021 ಹಾಗೂ ಕಾಲಕಾಲಕ್ಕೆ ಆಗಿರುವ ಅದರ ತಿದ್ದುಪಡಿ ನಿಯಮಗಳು, ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸೇಹಿಮ 2026, ದಿನಾಂಕ: 13.05.2026, ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 05 ಸೆಹಿಮ 2026, ದಿನಾಂಕ: 13.10.2026 ಹಾಗೂ ಕಾಲಕಾಲಕ್ಕೆ ಆಗಿರುವ ಅದರ ತಿದ್ದುಪಡಿಗಳು ಮತ್ತು ಸಂಬಂಧಪಟ್ಟ ಸಂಸ್ಥೆಗಳ ವ್ಯಂದ ಮತ್ತು ನೇಮಕಾತಿ ನಿಯಮಗಳು ಅನ್ವಯವಾಗುತ್ತವೆ.

ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:-

ಸಾ.ಅ.	ಸಾಮಾನ್ಯ ಅರ್ಹತೆ	GM	General Merit
ಪ.ಜಾ. (ಪ್ರ-ಎ) (ಪ್ರ-ಬಿ) (ಪ್ರ-ಸಿ)	ಪರಿಶಿಷ್ಟ ಜಾತಿ (ಪ್ರವರ್ಗ-ಎ) (ಪ್ರವರ್ಗ-ಬಿ) (ಪ್ರವರ್ಗ-ಸಿ)	SC (Cat-A) (Cat -B) (Cat -C)	Scheduled Caste (Category -A) (Category -B) (Category -C)
ಪ.ಪಂ.	ಪರಿಶಿಷ್ಟ ಪಂಗಡ	ST	Scheduled Tribe
ಪ್ರ-1	ಪ್ರವರ್ಗ-1	Cat–1	Category–1
2ಎ	ಪ್ರವರ್ಗ-2ಎ	2A	Category – 2A
2ಬಿ	ಪ್ರವರ್ಗ-2ಬಿ	2B	Category – 2B
3ಎ	ಪ್ರವರ್ಗ-3ಎ	3A	Category – 3A
3ಬಿ	ಪ್ರವರ್ಗ-3ಬಿ	3B	Category – 3B
ಮಾ.ಸೈ.	ಮಾಜಿ ಸೈನಿಕ	XMP	Ex- Service Men (Ex-Military person)
ಗ್ರಾಮೀಣ	ಗ್ರಾಮೀಣ ಅಭ್ಯರ್ಥಿ	Rural	Rural Candidate
ಕ.ಮಾ.ಅ.	ಕನ್ನಡ ಮಾಧ್ಯಮ ಅಭ್ಯರ್ಥಿ	KMS	Kannada Medium Student
ಯೋ.ಅ	ಯೋಜನಾ ನಿರಾಶ್ರಿತ ಅಭ್ಯರ್ಥಿ	PDP	Project Displaced Person
ಮ.ಅ	ಮಹಿಳಾ ಅಭ್ಯರ್ಥಿ	Wom	Woman Candidate
ತೃ.ಲಿ.	ತೃತೀಯ ಲಿಂಗಿ	TG	Transgender
ಕೆ.ಕೆ.	ಕಲ್ಯಾಣ-ಕರ್ನಾಟಕ	K.K	Kalyana-Karnataka
ಕ್ರೀ.ಸಾ	ಕ್ರೀಡಾ ಸಾಧಕ	SA	Sports Achievers

29/10/26

ಕಾರ್ಯನಿರ್ವಾಹಕ ನಿರ್ದೇಶಕರು,
ಕರ್ನಾಟಕ ಪರೀಕ್ಷಾ ಪ್ರಾಧಿಕಾರ

ಸೂಚನೆ:-

- ಈ ಅಧಿಸೂಚನೆಯಲ್ಲಿ ತಿಳಿಸಿರುವ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣಕ್ಕೆ ಸಂಬಂಧಿಸಿದಂತೆ, ನೇಮಕಾತಿ ಪ್ರಾಧಿಕಾರವು ಪರೀಕ್ಷೆ ದಿನಾಂಕಕ್ಕೆ ಮೊದಲು ಬದಲಾವಣೆ ಬಯಸಿದಲ್ಲಿ ಅಷ್ಟಕ್ಕೆ ಸೀಮಿತವಾಗಿ ಮಾತ್ರ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ತಿದ್ದುಪಡಿ ಅಧಿಸೂಚನೆ ಹೊರಡಿಸಲಾಗುವುದು;
- ಈ ಅಧಿಸೂಚನೆಯಲ್ಲಿನ ಹುದ್ದೆಗಳ ನೇಮಕಾತಿಗೆ ಪರೀಕ್ಷೆ ದಿನಾಂಕಕ್ಕೆ ಮೊದಲು, ಪದವಿ ಮಟ್ಟದ ವಿದ್ಯಾರ್ಹತೆ ಮತ್ತು ಒಂದೇ ಪಠ್ಯಕ್ರಮ ಇರುವ ಹೊಸದಾಗಿ ಇಲಾಖೆಗಳ ಪ್ರಸ್ತಾವನೆ ಬಂದಲ್ಲಿ ಅದನ್ನು ಸಹ ಪರಿಗಣಿಸಿ, ಈ ಅಧಿಸೂಚನೆಗೆ ಸೇರ್ಪಡೆ ಅಧಿಸೂಚನೆಯನ್ನು ಹೊರಡಿಸಲಾಗುವುದು;
- ಮುಂದುವರೆದು, ನೇಮಕಾತಿ ಪ್ರಾಧಿಕಾರ ಯಾವುದೇ ಸೂಚನೆ / ಬದಲಾವಣೆಗಳನ್ನು ಅರ್ಜಿ ಸಲ್ಲಿಸುವ ಕೊನೆಯ ಒಂದು ವಾರದೊಳಗೆ ತಿಳಿಸಿದರೆ ಅಭ್ಯರ್ಥಿಗಳ ಅವಗಾಹನೆಗೆ ಪ್ರಕಟಿಸಲಾಗುವುದು.